ಸಂಪುಟ : 8 ಸಂಚಿಕೆ : 260 ಪುಟ : 4 ಬೆಲೆ : 3.00 ಶುಕ್ರವಾರ ನವ್ಹಂಬರ್ 24, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 260 Pages : 4 Price : 3.00 Friday November 24, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನೀರು ಪೂರೈಕೆ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 24 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ** : ವಾರ್ಡ್ ನಂ. 22 ಅಪಾರ್ಟ್ಮೆಂಟ್, ಗಂಗಿಮಡಿ, ದಖನಿಯವರ ಲೈನ್, ಧಾರವಾಡ ಲೈನ್, ಗಿರಣಿ ಲೈನ್, ಈಶ್ವರ ಗುಡಿ ಲೈನ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 19,24,25 ಹಾಳದಿಬ್ಬ ಭಾಗ-1,2,3 ಅಬ್ಬಿಗೇರಿ ಕರುಗಲ್ ಪುಣೆಕರ ಲೈನ್, ಕರಿದೇವರ ಗುಡಿ ಲೈನ್, ಪಿಎಸ್ ಹಿರೇಮಠ ಮದ್ಲಿ ಓಣಿ, ಜೀರ ಓಣಿ, ಗಣಪತಿ ಗುಡಿ, ಜವಳಿ ಬಜಾರ, ಹಿಡ್ಕಿ ಮಠ ಭಾಗ-1,2 ಮುನಿಸಿ ಪ್ರೆಸ್, ಕುರುಬರ ಗರಡಿ, ಮಾಬು ಸುಬಾನಿ ಕಟ್ಟಿ, ಹನುಮಾನ ಗರಡಿಮನಿ ಲೈನ್, ಖಾನ್ ತೋಟ ಭಾಗ-1,2.

ವಾರ್ಡ್ ನಂ. 30,34 ವಡ್ಡರಗೇರಿ 46 ಪ್ಲಾಟ್, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಹೂಗಾರ ಪ್ಲಾಟ್, ಕುಂಚಿ ಕೊರವರ ಓಣಿ, ಶಿವಾನಂದ ಗಾರ್ಡನ್ 1ನೆ ಕ್ರಾಸ್, ಶರಣಬಸವೇಶ್ವರ ಶಾಲೆ ಲೈನ್, ಮಸೂತಿ ಲೈನ್.

ತಾಂತ್ರಿಕವಾಗಿ ನೀರು ಪೂರೈಕೆಯಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕ್ಷೇತ್ರ ಅಧಿಕಾರಿಗಳ, ಮತಗಟ್ಟೆ ಮೇಲ್ವಿಚಾರಕರ ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಚುನಾವಣಾಧಿಕಾರಿ

# ಜವಾಬ್ದಾರಿಗಳನ್ನು ಅರಿತು ಕಾರ್ಯ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ



ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಕ್ಷೇತ್ರ ಅಧಿಕಾರಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ತಮಗೆ ವಹಿಸಲಾದ ಕರ್ತವ್ಯಗಳನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಗುರುವಾರ ಸಾಯಂಕಾಲ ಜರುಗಿದ ಕ್ಷೇತ್ರ ಅಧಿಕಾರಿಗಳ, ಮತಗಟ್ಟೆ ಮೇಲ್ವಿಚಾರಕರ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಕ್ಷೇತ್ರ ಅಧಿಕಾರಿಗಳು ಮತದಾನ ಪೂರ್ವವಾಗಿ ತಮ್ಮ ಜವಾಬ್ದಾರಿಗಳನ್ನು ಅರಿತುಕೊಂಡು ಚುನಾವಣಾ ಸಂದರ್ಭದಲ್ಲಿ ಯಾವುದೇ ಲೋಪ-ದೋಷಗಳಾಗದಂತೆ ನಿಗಾ ವಹಿಸಬೇಕು. ತಮಗೆ ವಹಿಸಲಾದ ಮತಗಟ್ಟೆಗಳ ಮಾಹಿತಿ ಹೊಂದುವುದರ ಜೊತೆಗೆ ತಮ್ಮ ಮತಗಟ್ಟೆಗಳ ನಡುವಿನ ಅಂತರವನ್ನು ತಿಳಿದುಕೊಂಡಿರುವಂತೆ ಸೂಚನೆ ನೀಡಿದರು.

ಕರಡು ಮತದಾರರ ಪಟ್ಟಿ ಪ್ರಕಟವಾಗಿದ್ದು, ಆಕ್ಷೇಪಣೆಗಳನ್ನು ಸಲ್ಲಿಸಲು ಸಮಯಾವಕಾಶ ನೀಡಲಾಗಿದೆ. ಕ್ಷೇತ್ರ ಅಧಿಕಾರಿಗಳು ತಮ್ಮ ಮತಗಟ್ಟೆಯ ಮತದಾರರ ಸಂಪೂರ್ಣ ಮಾಹಿತಿಯನ್ನು ಪಡೆದಿಟ್ಟುಕೊಳ್ಳಬೇಕು. ಅಲ್ಲದೇ ಮತಗಟ್ಟೆಗಳಲ್ಲಿನ ಮೂಲಭೂತ ಸೌಕರ್ಯಗಳ ಕುರಿತು ಗಮನ ಹರಿಸಬೇಕು. ರಾಜ್ಯ ಮುಖ್ಯ ಚುನಾವಣಾಧಿಕಾರಿಗಳು ಜಿಲ್ಲೆಗೆ ಭೇಟಿ ನೀಡಲಿದ್ದು, ಅವರು ಆಗಮಿಸಿದ ಸಂದರ್ಭದಲ್ಲಿ ಸಮರ್ಪಕವಾದ ಮಾಹಿತಿ ಒದಗಿಸುವಂತೆಯೂ ಸೂಚಿಸಿದರು.

ಸಾಮಾಜಿಕ ಜಾಲತಾಣಗಳ ಮೂಲಕ ವಿವಿ ಪ್ಯಾಟ್ ಯಂತ್ರದ ಬಳಕೆ ಕುರಿತು ಜಾಗೃತಿ ಮೂಡಿಸಬೇಕು ಎಂದು ಚುನಾವಣೆಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಅಧಿಕಾರಿಗಳ ಕಾರ್ಯ ಹಾಗೂ ಜವಾಬ್ದಾರಿಗಳ ಕುರಿತು ವಿಸ್ತೃತವಾಗಿ ಮನವರಿಕೆ ಮಾಡಿಕೊಟ್ಟರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ದುರ್ಬಲ ಪ್ರದೇಶಗಳನ್ನು ಗುರುತಿಸಿ ತಹಸೀಲ್ದಾರರು ಹಾಗೂ ಸಂಬಂಧಿಸಿದ ಪೊಲೀಸ್ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ಜರುಗಿಸಬೇಕು. ಚುನಾವಣಾ ನೀತಿ ಸಂಹಿತೆ ಹಾಗೂ ಮತದಾನದ ದಿನದಂದು ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಸಂಬಂಧಿಸಿದ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಪೊಲೀಸ್ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ಜರುಗಿಸಲು ಸೂಚಿಸಿ, ಮುಕ್ತ ಹಾಗೂ ಶಾಂತಿಯುತ ಚುನಾವಣೆ ನಡೆಸಲು ಅಗತ್ಯದ ಎಲ್ಲ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಬಿ.ಜಿ. ಗಿರಿತಿಮ್ಮಣ್ಣವರ ವಿದ್ಯುನ್ಮಾನ ಮತಯಂತ್ರ ಹಾಗೂ ವಿವಿ ಪ್ಯಾಟ್ ಬಳಕೆ ಕುರಿತು ಪ್ರಾತ್ಯಕ್ಷಿಕೆ ನೀಡಿದರು. ಕಾರ್ಯಾಗಾರದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ತಹಸೀಲ್ದಾರರು, ಕ್ಷೇತ್ರ ಅಧಿಕಾರಿಗಳು ಹಾಜರಿದ್ದರು.

> ಕ್ಷೇತ್ರ ಅಧಿಕಾರಿಗಳು ತಮ್ಮ ಮತಗಟ್ಟೆಗಳ ವ್ಯಾಪ್ತಿಯಲ್ಲಿ ವಿದ್ಯುನ್ಮಾನ ಮತಯಂತ್ರಗಳ ಕುರಿತು ಮತದಾರರಲ್ಲಿ ಜಾಗೃತಿ ಮೂಡಿಸಬೇಕು. ಮತದಾರರ ಜಾಗೃತಿಗಾಗಿ ಒದಗಿಸಲಾದ ವಿದ್ಯುನ್ಮಾನ ಮತ ಯಂತ್ರಗಳನ್ನು ಜಾಗರೂಕತೆಯಿಂದ ನಿರ್ವಹಿಸಬೇಕು. ಉಪವಿಭಾಗಾಧಿಕಾರಿಗಳ ಹಾಗೂ ಎಲ್ಲ ತಾಲೂಕಿನ ತಹಸೀಲ್ದಾರ ಕಚೇರಿಗಳಲ್ಲಿ ಮತದಾರರಿಗೆ ಮತಯಂತ್ರದ ಪ್ರಾತ್ಯಕ್ಷಿಕೆ ನೀಡಲು ಕ್ರಮ ವಹಿಸಬೇಕು. ಇದರ ಜೊತೆಗೆ ಸಂಚಾರಿ ಜಾಗೃತಿ ವಾಹನದ ಮೂಲಕ ಪ್ರತಿ ತಾಲೂಕಿನಲ್ಲಿ ಸಂಚರಿಸಿ ಮತದಾರರಲ್ಲಿ ವಿದ್ಯುನ್ಮಾನ ಮತಯಂತ್ರದ ಬಳಕೆ ಕುರಿತು ಜಾಗೃತಿ ಮೂಡಿಸಲು ಕ್ರಮ ವಹಿಸಬೇಕು.
>
> **- ವೈಶಾಲಿ ಎಂ.ಎಲ್.**
> **ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳು.**



## ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲೆಯ ಪ್ರತಿಯೊಬ್ಬ ರೈತರು ಸರಕಾರದ ಸೌಲಭ್ಯಗಳು ಹಾಗೂ ಸಹಾಯಧನ ಪಡೆಯಲು ತಮಗೆ ಸಂಬಂಧಪಟ್ಟ ಎಲ್ಲಾ ಜಮೀನುಗಳನ್ನು (ಫ್ರೂಟ್ಸ್ ತಂತ್ರಾಂಶ) ಎಫ್.ಐ.ಡಿ ಗೆ ಕಡ್ಡಾಯವಾಗಿ ಜೋಡಣೆ ಮಾಡಿಸಬೇಕು.

ಈಗಾಗಲೇ ಎಫ್.ಐ.ಡಿ. ಮಾಡಿಸಿಕೊಂಡ ರೈತರು ತಮ್ಮ ಎಫ್.ಐ.ಡಿ. ಗೆ ಎಲ್ಲ ಜಮೀನಿನ ಸರ್ವೆ ನಂಬರುಗಳು ಜೋಡಣೆಯಾಗಿದೆ-ಯೋ ಅಥವಾ ಇಲ್ಲವೋ ಎಂದು ಕೂಡಲೇ ಪರಿಶೀಲಿಸಿಕೊಳ್ಳಿ. ಮತ್ತು ಜಂಟಿ ಖಾತೆದಾರರಿದ್ದಲ್ಲಿ ಪ್ರತಿ ಒಬ್ಬ ಜಂಟಿ ಖಾತೆದಾರರು ಪ್ರತ್ಯೇಕವಾಗಿ ಸೌಲಭ್ಯವನ್ನು ಪಡೆಯಬೇಕೆಂದಲ್ಲಿ ಪ್ರತ್ಯೇಕವಾಗಿ ಎಫ್.ಐ.ಡಿ. ಮಾಡಿಸಿಕೊಳ್ಳಬೇಕು.

ಜಿಲ್ಲೆಯ ರೈತ ಬಾಂಧವರು ನವೆಂಬರ್ 29 ರೊಳಗಾಗಿ ತಮಗೆ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ತೋಟಗಾರಿಕೆ, ಕಂದಾಯ ಇಲಾಖೆ, ಗ್ರಾಮ ಒನ್ ಅಥವಾ ಸಿ.ಎಸ್.ಸಿ. ಸೆಂಟರ್‌ಗಳಿಗೆ ಭೇಟಿ ನೀಡಿ ಎಫ್.ಐ.ಡಿ. ಮಾಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಮಟ್ಟದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.

# ಎಫ್‌ಎಕ್ಯೂ ಗುಣಮಟ್ಟ ದೃಢೀಕರಿಸಲು ಕ್ರಮ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ



ಕೇಂದ್ರ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿ ಜೋಳ ಹಾಗೂ ರಾಗಿ ಖರೀದಿಸಲು ದರ ನಿಗದಿಪಡಿಸಿದ್ದು, ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಬಿಳಿ ಜೋಳದ ಉತ್ಪನ್ನವನ್ನು ಖರೀದಿಸುವ ಉದ್ದೇಶದಿಂದ ಖರೀದಿ ಕೇಂದ್ರಗಳನ್ನು ತೆರೆಯಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ನೇಮಿಸಲ್ಪಟ್ಟ ಸಂಗ್ರಹಣಾ ಏಜೆನ್ಸಿಗಳು ಜೋಳ ಖರೀದಿ ಹಂತದಲ್ಲಿ ಕೇಂದ್ರ ಸರ್ಕಾರದಿಂದ ನಿಗದಿಪಡಿಸಿದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಜನೆವರಿ 1ರಿಂದ ಮಾರ್ಚ್ 31ರ ಅವಧಿಯಲ್ಲಿ ಖರೀದಿ ಪ್ರಕ್ರಿಯೆ ಜರುಗಿಸಬೇಕು. ಡಿಸೆಂಬರ್ 1ರಿಂದ ನೊಂದಣಿ ಕಾರ್ಯ ಕೈಗೊಳ್ಳಬೇಕು. ರೈತರಿಂದ ಖರೀದಿಸಲು ತೆರೆಯಲಾಗಿರುವ ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆಯ ವತಿಯಿಂದ ಗ್ರೇಡರ್‌ಗಳನ್ನು ನೇಮಿಸಬೇಕು. ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ರೈತರಿಂದ ಅವರು ಹೊಂದಿರುವ ಜಮೀನಿಗೆ ಅನುಗುಣವಾಗಿ ಬಿಳಿ ಜೋಳವನ್ನು ಖರೀದಿಸಬೇಕು. ಸರ್ಕಾರವು ನಿಗದಿಪಡಿಸಿದ ಪ್ರಮಾಣವನ್ನು ಮೀರಿ ಹೆಚ್ಚುವರಿಯಾಗಿ ಬಿಳಿ ಜೋಳವನ್ನು ಖರೀದಿಸುವಂತಿಲ್ಲ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಸೂಚಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಎಪಿಎಂಸಿಯ ಸಿ.ಎ. ಹೂಗಾರ, ಟಾಸ್ಕ್‌ಫೋರ್ಸ್ ಸಮಿತಿ ಸದಸ್ಯರು ಹಾಜರಿದ್ದರು.

> ಆಹಾರ ಮತ್ತು ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಗಂಗಪ್ಪ ಎಂ. ಮಾತನಾಡಿ, 2023-2024ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಬಿಳಿ ಜೋಳ-ಹೈಬ್ರೀಡ್ ಪ್ರತಿ ಕ್ವಿಂಟಾಲ್‌ಗೆ ರೂ.3180, ಬಿಳಿ ಜೋಳ-ಮಾಲ್ದಂಡಿ ರೂ. 3225 ನಿಗದಿಪಡಿಸಲಾಗಿದೆ. ಗದಗ ಜಿಲ್ಲೆಯಲ್ಲಿ 2 ಖರೀದಿ ಕೇಂದ್ರಗಳನ್ನು ತೆರೆಯಲಾಗಿದ್ದು, ಗದಗ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ ಹಾಗೂ ರೋಣದ ಎಪಿಎಂಸಿ ಪ್ರಾಂಗಣದಲ್ಲಿ ಖರೀದಿ ಪ್ರಕ್ರಿಯೆ ಜರುಗಲಿವೆ ಎಂದು ಸಭೆಗೆ ಮಾಹಿತಿ ನೀಡಿದರು.

### ಅಡುಗೆಯವರಿಗೆ ಸುರಕ್ಷತೆ-ಸ್ವಚ್ಛತೆ ಕುರಿತು ತರಬೇತಿ ಕಾರ್ಯಾಗಾರ

## ಬಿಸಿಯೂಟ ತಯಾರಿಕೆಯಲ್ಲಿ ಹೆಚ್ಚಿನ ನಿಗಾ ವಹಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಮಕ್ಕಳಿಗೆ ಶುಚಿ ಹಾಗೂ ರುಚಿಕರ, ಗುಣಮಟ್ಟದ ಬಿಸಿಯೂಟ ಪೂರೈಕೆ ಮಾಡುವುದರಿಂದ ಮಕ್ಕಳಲ್ಲಿ ಸಮರ್ಪಕ ಬೆಳವಣಿಗೆ ಕಾಣಬಹುದಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಡಾ. ಜನಗಿ ತಿಳಿಸಿದರು.

ಗದಗ ತಾ.ಪಂ ಸಭಾಂಗಣದಲ್ಲಿ ಪಿಎಂ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆ ಹಾಗೂ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಬೆಂಗಳೂರು ಇವರ

> ಸಂಪನ್ಮೂಲ ವ್ಯಕ್ತಿಗಳಾದ ಎಮ್.ಎಮ್. ನಿಂಬನಾಯ್ಕರ್, ಕೆ.ಎ. ಕೌಜಗೇರಿ ಮಾತನಾಡಿ, ಅಡುಗೆ ಕೋಣೆ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಬಿಸಿಯೂಟ ಪೂರ್ಣಗೊಂಡ ನಂತರ ಪಾತ್ರೆಗಳನ್ನು ಸ್ವಚ್ಛ ಪರಿಕರಗಳಿಂದ ಸುರಕ್ಷಿತವಾಗಿ ಮುಚ್ಚಬೇಕು. ಅಡುಗೆಯನ್ನು ವಿತರಿಸುವಾಗ ಮಕ್ಕಳಲ್ಲಿ ನೂಕು ನುಗ್ಗಲಾಗದಂತೆ ಕ್ರಮ ವಹಿಸಿ ಸರದಿ ಪ್ರಕಾರ ಊಟ ವಿತರಿಸಿದರೆ ಶಾಂತಿ ಕಾಪಾಡಬಹುದಾಗಿದೆ ಎಂದರಲ್ಲದೆ, ಬಿಸಿಯೂಟ ತಯಾರಿಕೆ ಹಾಗೂ ವಿತರಣೆಗೆ ಕೈಗೊಳ್ಳಬಹುದಾದ ಮುಂಜಾಗ್ರತಾ ಕ್ರಮಗಳನ್ನು ವಿವರಿಸಿದರು.

▶▶ 3 ನೇ ಪುಟಕ್ಕೆ

### ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಧರಣಿ ಆರಂಭ

## ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಭೇಟಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ




ಸೇವಾ ಕಾಯಂಗೆ ಆಗ್ರಹಿಸಿ ರಾಜ್ಯಾದ್ಯಂತ ಆರಂಭಗೊಂಡಿರುವ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹಕ್ಕೆ ಕೊಪ್ಪಳದಲ್ಲಿ ಬೆಂಬಲ ವ್ಯಕ್ತವಾಗಿದೆ.

ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಜಿಲ್ಲಾ ಸಂಘಟನೆಯ ನೇತೃತ್ವದಲ್ಲಿ ಗುರುವಾರ ಸೇವಾ ಕಾಯಂಗೆ ಆಗ್ರಹಿಸಿ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಅನಿರ್ದಿಷ್ಟಾವಧಿ ಧರಣಿಗೆ ಚಾಲನೆ ನೀಡಲಾಯಿತು. ಸುತ್ತಮುತ್ತಲಿನ ಸರಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರು ಧರಣಿಯಲ್ಲಿ ಪಾಲ್ಗೊಂಡಿದ್ದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷ ಡಾ.ವೀರಣ್ಣ ಸಜ್ಜನರ್ ಸುಮಾರು ಹತ್ತು-ಹದಿನೈದು ವರ್ಷಗಳಿಂದ ಸರಕಾರಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದರೂ ಅತಿಥಿ ಪಟ್ಟ ಸಿಕ್ಕಿದೆ. ನಮಗೆ ಅತಿಥಿಯ ಹಣೆಪಟ್ಟಿ ಬೇಕಿಲ್ಲ. ಸೇವೆ ಪರಿಗಣಿಸಿ ಕಾಯಂಗೊಳಿಸಬೇಕು ಎಂದು ಆಗ್ರಹಿಸಿದರು.

ಸಂಘಟನೆಯ ಪ್ರಧಾನ ಕಾರ್ಯದರ್ಶಿ ಡಾ.ಸಣ್ಣ ದೇವೇಂದ್ರಸ್ವಾಮಿ ಮಾತನಾಡಿ, ಸರಕಾರ ವಿವಿಧ ಇಲಾಖೆ, ವಲಯಗಳ ಗುತ್ತಿಗೆ, ಹೊರಗುತ್ತಿಗೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಸೇವಾಭದ್ರತೆ ಕಲ್ಪಿಸಿದೆ.

▶▶ 3ನೇ ಪುಟಕ್ಕೆ

> **ವಿಧಾನ ಪರಿಷತ್ ಸದಸ್ಯೆ ಹೇಮಲತಾ ಭೇಟಿ**
>
> ಅತಿಥಿ ಉಪನ್ಯಾಸಕರ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿದ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಪ್ರತಿಭಟನಾಕಾರರ ಮನವಿ ಆಲಿಸಿ, ನಮ್ಮ ಸರಕಾರ ಅಧಿಕಾರದಲ್ಲಿದ್ದಾಗ ಅತಿಥಿ ಉಪನ್ಯಾಸಕರ ಗೌರವ ಧನವನ್ನು ದುಪ್ಪಟ್ಟು ಹೆಚ್ಚಿಸಿತ್ತು. ಬರಲಿರುವ ಚಳಿಗಾಲದ ಅಧಿವೇಶನದಲ್ಲಿ ಅತಿಥಿ ಉಪನ್ಯಾಸಕರ ಬೇಡಿಕೆಯನ್ನು
> ಈಗಿನ ಸರಕಾರದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.

> **ಬೆಂಬಲ ನೀಡಿದ ಬೆಟ್ಟದೂರು:**
>
> ನಿವೃತ್ತ ಪ್ರಾಚಾರ್ಯ, ಬಂಡಾಯ ಸಾಹಿತಿ ಹಾಗೂ ಪಠ್ಯ ಪುಸ್ತಕ ರಚನಾ ಸಮಿತಿ ಮುಖಂಡ ಅಲ್ಲಮಪ್ರಭು ಬೆಟ್ಟದೂರು ಅತಿಥಿ ಉಪನ್ಯಾಸಕರ ಪ್ರತಿಭಟನೆಯನ್ನು ಬೆಂಬಲಿಸಿ, ಬೇಡಿಕೆಯನ್ನು ಸರಕಾರದ ಗಮನಕ್ಕೆ ತರಲಾಗುವುದು ಎಂದರು.

## ಸಾಕ್ಷಿ ಸುಭಾಷಿತ

ಸಾಧ್ಯವಾದರೆ ಹತ್ತು ಜನರಿಗೆ ನೆರವಾಗು, ಆಗದಿದ್ದರೆ ಹಾದಿಯಲ್ಲಿ ಕಾಣುವ ಗಾಜಿನ ಚೂರನ್ನಾದರೂ ಹೆಕ್ಕಿ ಕಸದ ತೊಟ್ಟಿಗೆ ಹಾಕು.

–ಕಣ್ಣದಾಸನ್

## ಸಂಪಾದಕೀಯ

### ರಾಹುಲ್ ವಿಷಯಾಧಾರಿತ ಟೀಕೆ ಮಾಡಲಿ

ದೇಶದಲ್ಲಿ ನಡೆಯುತ್ತಿರುವ ಪಂಚ ರಾಜ್ಯ ಚುನಾವಣೆ ಪ್ರಚಾರ ಭರ್ಜರಿಯಾಗಿ ನಡೆಯುತ್ತಿದೆ. ವಿಶೇಷವಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅಬ್ಬರದ ಪ್ರಚಾರ ನಡೆಸುತ್ತಿದ್ದಾರೆ.

ಚುನಾವಣಾ ಪ್ರಚಾರ ಎಂದ ಮೇಲೆ ಎದುರಾಳಿಯನ್ನು ಟೀಕಿಸುವುದು ಸರ್ವೇಸಾಮಾನ್ಯ. ರಾಹುಲ್ ಗಾಂಧಿ ತಮ್ಮ ಪ್ರತಿಯೊಂದು ಚುನಾವಣಾ ಪ್ರಚಾರ ಸಭೆಯಲ್ಲಿಯೂ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸುವುದು ಸಾಮಾನ್ಯ ಸಂಗತಿಯೇ.

ಆದರೆ ಇತ್ತೀಚಿಗೆ ರಾಹುಲ್ ಗಾಂಧಿ ಮಾಡುತ್ತಿರುವ ಟೀಕೆಗಳು ವಿಷಯಧಾರಿತವಾಗಿಲ್ಲ ಎನ್ನುವುದು ಸ್ಪಷ್ಟವಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅಧಿಕಾರಾವಧಿಯಲ್ಲಿ ನಡೆದ ಕಾರ್ಯಕ್ರಮಗಳ ವೈಫಲ್ಯದ ಬಗ್ಗೆ ಮಾತನಾಡುವುದಕ್ಕಿಂತ ಹೆಚ್ಚಾಗಿ, ವೈಯಕ್ತಿಕ ನಿಂದನೆಗೆ ಹೆಚ್ಚು ಒತ್ತು ಕೊಡುತ್ತಿದ್ದಾರೆ.

ರಾಜಸ್ಥಾನದಲ್ಲಿ ನಡೆದ ಚುನಾವಣೆ ಪ್ರಚಾರದಲ್ಲಿ ಮೋದಿ ಅಪಶಕುನ, ಜೇಬುಗಳ್ಳ ಎನ್ನುವಂತಹ ಪದ ಪ್ರಯೋಗ ಮಾಡಿದ್ದಾರೆ. ಅದಕ್ಕಾಗಿ ಚುನಾವಣಾ ಆಯೋಗದಿಂದ ನೋಟಿಸ್ ಸಹ ಜಾರಿಗೊಂಡಿದೆ.

ಇದಕ್ಕೂ ಪೂರ್ವದಲ್ಲಿ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾರತ ತಂಡ ಸೋಲುವುದಕ್ಕೂ ಪ್ರಧಾನಿ ನರೇಂದ್ರ ಮೋದಿ ಕಾರಣ. ಪ್ರಧಾನಿ ಮೋದಿ ಪಂದ್ಯ ವೀಕ್ಷಿಸಲು ಹೋಗಿದ್ದರಿಂದಲೇ ಭಾರತ ಸೋಲನುಭವಿಸಿತು ಎಂದು ಟೀಕಿಸಿದ್ದರು.

ರಾಹುಲ್ ಗಾಂಧಿ ಈ ರೀತಿ ವೈಯಕ್ತಿಕ ನಿಂದನೆ ಮಾಡುವುದನ್ನು ಬಿಟ್ಟು ವಿಷಯಾಧಾರಿತವಾಗಿ ಟೀಕೆ ಮಾಡುವುದನ್ನು ರೂಢಿಸಿಕೊಳ್ಳಲಿ. ಕೇಂದ್ರ ಸರಕಾರದ ಕಾರ್ಯಕ್ರಮಗಳ ವೈಫಲ್ಯಗಳ ಬಗ್ಗೆ ಅಧಿಕಾರಯುತವಾಗಿ ಟೀಕೆ ಮಾಡಲಿ. ದಾಖಲೆ ಸಹಿತ ಆರೋಪ ಮಾಡಲಿ. ಅಂದಾಗ ಮಾತ್ರ ಜನರ ಮನಸ್ಸು ಬದಲಾಯಿಸಲು ಸಾಧ್ಯ.

ರಾಹುಲ್ ಗಾಂಧಿ ತಮ್ಮ ಟೀಕೆಯ ವರಸೆ ಬದಲಿಸಿಕೊಳ್ಳದಿದ್ದರೆ ಜನರ ಮತ ಸೆಳೆಯುವುದು ಸಾಧ್ಯವೇ ಇಲ್ಲ.

---

ಮಧುರೈನ ಪೆರುಂಗಮನಲ್ಲೂರ್ ಗ್ರಾಮದ ಸಾವಯವ ಕೃಷಿಕ ಪಿ. ಗಣೇಶನ್‌ರ ಗವ್ಯೋತ್ಪನ್ನ

# ಗೋಮಯದಿಂದಲೇ ಸಿದ್ಧವಾಗುತ್ತವೆ ಕಲಾಕೃತಿಗಳು





ಕೃಷಿ ಪ್ರಧಾನ ದೇಶವಾದ ಭಾರತದಲ್ಲಿ ಕೃಷಿಕರ ಸಂಖ್ಯೆ ಕ್ಷೀಣಿಸುತ್ತಿದೆ, ಯುವಕರಂತೂ ಕೃಷಿಯಲ್ಲಿ ಆಸಕ್ತಿಯನ್ನೇ ಹೊಂದಿಲ್ಲ ಇತ್ಯಾದಿ ಮಾತುಗಳು ಇತ್ತೀಚಿನ ದಿನಗಳಲ್ಲಿ ಸಾಮಾನ್ಯವಾಗಿದೆ. ಒಂದೆಡೆ ಹೌದೆನಿಸಿದರೂ, ಕೃಷಿಕರ ಮನೆಯ ಮಕ್ಕಳೇ ಕೃಷಿಯಿಂದ ಹೆಚ್ಚು ವಿಕರ್ಷಿತರಾಗುತ್ತಿದ್ದಾರೆ ಮತ್ತು ಯಾವುದೇ ಕೃಷಿ ಹಿನ್ನೆಲೆ ಹೊಂದಿರದ ಆಸಕ್ತರು ಹೆಚ್ಚೆಚ್ಚು ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆಂಬುದೂ ಸತ್ಯವೇ.

ಹೀಗೆಲ್ಲ ಇರುವಾಗ, ಕೃಷಿ ಕ್ಷೇತ್ರ ಎಲ್ಲಿಂದ, ಯಾವಾಗಿಂದ, ಹೇಗೆ, ಯಾರಿಂದ ಬಡವಾಗುತ್ತಿದೆ, ಇದಕ್ಕೆ ಪರಿಹಾರವೇನು ಎಂಬೆಲ್ಲ ಪ್ರಶ್ನೆಗಳಿಗೆ ಉತ್ತರ ದಕ್ಕದು. ಕೃಷಿಯೊಂದೇ ಏಕೆ, ಕೃಷಿಗೆ ಮೂಲಾಧಾರವಾದ ಹೈನುಗಾರಿಕೆಯೂ ಸೊರಗುತ್ತಿದೆ. ಕೃಷಿಯನ ದನದ ಕೊಟ್ಟಿಗೆಯಲ್ಲಿ ತುಂಬಿ ತುಳುಕುತ್ತಿದ್ದ ಜಾನುವಾರುಗಳು ಕಡಿಮೆಯಾಗಿವೆ.

ಇವೆಲ್ಲವುಗಳ ನಡುವೆಯೂ, ಮುಂಚಿನಂತೆಯೇ ಆಸಕ್ತಿ ಉಳಿಸಿಕೊಂಡು, ಕೃಷಿ–ಹೈನುಗಾರಿಕೆಯಲ್ಲಿಯೇ ಮುಂದುವರೆಯುತ್ತ, ಹೊಸ ಹೊಸ ಪ್ರಯೋಗಗಳನ್ನು ಮಾಡುತ್ತ ಸಮೃದ್ಧರಾಗಿರುವ ಕೃಷಿಕರೂ ಇಲ್ಲವೆಂತಲ್ಲ. ಇಂಥವರಲ್ಲಿ ನೆರೆಯ ತಮಿಳುನಾಡಿನ ಮಧುರೈನ ಪೆರುಂಗಮನಲ್ಲೂರ್ ಗ್ರಾಮದ ಸಾವಯವ ಕೃಷಿಕ ಪಿ.ಗಣೇಶನ್ ಗಮನಸೆಳೆಯುತ್ತಾರೆ. ಸುಮಾರು ಐದು ವರ್ಷಗಳ ಹಿಂದೆ ತಮ್ಮ ಒಂಬತ್ತು ಎಕರೆ ಕೃಷಿಭೂಮಿಯನ್ನು ಪ್ರಮಾಣೀಕೃತ ಸಾವಯವ ಕೃಷಿಭೂಮಿಯಾಗಿ ಪರಿವರ್ತಿಸಿದ ಗಣೇಶನ್, ಪರಿಸರ ಸ್ನೇಹಿ ಕೃಷಿಯಲ್ಲಿ ಹಸುವಿನ ಸಗಣಿಯ ಮಹತ್ವವನ್ನು ಚೆನ್ನಾಗಿ ಅರಿತು ಮುನ್ನಡೆಯುತ್ತಿದ್ದಾರೆ. ಹೊಸ ಹೊಸ ಪ್ರಯೋಗಗಳಿಗೂ ಒಡ್ಡಿಕೊಳ್ಳುತ್ತಿದ್ದಾರೆ.

ಹಸುವಿನ ಸಗಣಿ ಮತ್ತು ಗೋಮೂತ್ರವನ್ನು ಮಾತ್ರ ಬಳಸಿ ಕಲಾಕೃತಿಗಳನ್ನು ತಯಾರಿಸುವ ಹೊಸ ಮಾರ್ಗವನ್ನೂ ಹುಡುಕಿದ್ದಾರೆ. ಇದೇ ಮೂಲವಸ್ತುಗಳನ್ನು ಬಳಸಿಕೊಂಡು ಸಣ್ಣ ಗಣೇಶ ವಿಗ್ರಹಗಳನ್ನು ತಯಾರಿಸುವ ಮೂಲಕ ತಮ್ಮ ಹೊಸ ಕೆಲಸಗಳಿಗೆ ನಾಂದಿ ಹಾಡಿದ ಗಣೇಶನ್, ಪ್ರಸ್ತುತ 150ಕ್ಕೂ ಹೆಚ್ಚು ವಿವಿಧ ಅಲಂಕಾರಿಕ ಉತ್ಪನ್ನಗಳನ್ನು ತಯಾರಿಸುತ್ತಾರೆ. ಈ ಕೆಲಸಕ್ಕೆ ಯಾವುದೇ ಯಂತ್ರಗಳಾಗಲೀ, ಅಚ್ಚುಗಳಾಗಲೀ ಬಳಕೆಯಿಲ್ಲ. ಗೋಮಯ ಮತ್ತು ಗೋಮೂತ್ರದ ಹೊರತಾಗಿ ಬೇರಾವುದೇ ವಸ್ತುಗಳನ್ನೂ ಸೇರಿಸುವುದಿಲ್ಲ. ಇದು ಸಂಪೂರ್ಣ ನೈಸರ್ಗಿಕ ಮತ್ತು ಪರಿಸರ ಸ್ನೇಹಿ ಉತ್ಪನ್ನ.

ಪ್ರಾರಂಭದ ವರ್ಷದಲ್ಲಿ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಅವರು ತಯಾರಿಸಿದ 60 ಮೂರ್ತಿಗಳು ನೋಡನೋಡುತ್ತಿದ್ದಂತೆ ಮಾರಾಟವಾದವು. ಇದರಿಂದ ಪ್ರೇರಿತರಾದ ಗಣೇಶನ್, ಇನ್ನಷ್ಟು ವೈವಿಧ್ಯಮಯ ಉತ್ಪನ್ನಗಳನ್ನು ಸೇರಿಸಿದರು. ಕುಂಕುಮ ಬಟ್ಟಲು, ಮಸಾಲೆ ಡಬ್ಬಿ, ಪೆನ್ ಸ್ಟ್ಯಾಂಡ್, ಹಣ್ಣಿನ ಸ್ಟ್ಯಾಂಡ್, ಬಾಗಿಲ ತೋರಣ ಹೀಗೆ 150ಕ್ಕೂ ವಿಧದ ಉತ್ಪನ್ನಗಳು ಇವರ ಕೈಚಳಕದಿಂದ ಸಿದ್ಧವಾಗುತ್ತವೆ.

ಪ್ರತಿಯೊಂದು ಕಲಾಕೃತಿಯ ತಯಾರಿಕೆಗೂ ಸಾಕಷ್ಟು ಸಮಯ ಮತ್ತು ತಾಳ್ಮೆ ಬೇಕಾಗುತ್ತದೆ ಎನ್ನುತ್ತಾರವರು. ಎಲ್ಲಾ ಉತ್ಪನ್ನಗಳನ್ನು ತಯಾರಿಸಲು ಹಸುವಿನ ತಾಜಾ ಸಗಣಿಯನ್ನು ಬಳಸಲಾಗುತ್ತದೆ. ಉತ್ಪನ್ನದ ದಪ್ಪಕ್ಕೆ ಅನುಗುಣವಾಗಿ ಅದನ್ನು ಬಿಸಿಲಿನಲ್ಲಿ ಒಣಗಿಸಬೇಕಾಗುತ್ತದೆ. ಈ ಕಾರಣಕ್ಕೆ, ಮಳೆಗಾಲದ ನಾಲ್ಕು ತಿಂಗಳು ಈ ಕೆಲಸವನ್ನು ನಿಲ್ಲಿಸಬೇಕಾಗುತ್ತದೆ. ಸೂಕ್ತವಾಗಿ ತಯಾರಾದ ಉತ್ಪನ್ನ ಹವಾಮಾನಕ್ಕನುಗುಣವಾಗಿ ಕನಿಷ್ಠ 10 ವರ್ಷಗಳವರೆಗೆ ಬಾಳಿಕೆ ಬರುತ್ತವೆ. ಅಲ್ಲಿಯವರೆಗೂ ಸಣ್ಣ ಬಿರುಕು ಕೂಡ ಕಾಣುವುದಿಲ್ಲ ಎನ್ನುತ್ತಾರೆ ಗಣೇಶನ್.

ಹಸುವಿನ ಸಗಣಿಯ ಈ ಕಲಾಕೃತಿಗಳ ಇನ್ನೊಂದು ವಿಶೇಷತೆಯೆಂದರೆ, ಇವು ಶೇ.100ರಷ್ಟು ಸಾವಯವ, ಪರಿಸರ ಸ್ನೇಹಿ ಮತ್ತು ಮರುಬಳಕೆಗೆ ಯೋಗ್ಯವಾದವು. ಒಂದುವೇಳೆ, ಉತ್ಪನ್ನ ಹಾಳಾಯಿತು, ಇನ್ನೇನೋ ಆಯಿತೆಂದರೂ ತೆಗೆದು ನೇರವಾಗಿ ಗಿಡಗಳಿಗೆ ಗೊಬ್ಬರವಾಗಿ ಬಳಸಬಹುದು. ಮರುಬಳಕೆ ಮಾಡಬಹುದು, ಸಾವಯವ ಪುಡಿಯಾಗಿ ಬಳಸಬಹುದು, ನೀರಿನೊಂದಿಗೆ ಬೆರೆಸಿ ಸಸ್ಯಗಳ ಮೇಲೆ ಸಿಂಪಡಿಸಬಹುದು! ಪರಿಸರಕ್ಕೆ ಲೇಶವೂ ಹಾನಿಯಿಲ್ಲ.

ಮತ್ತೆ, ಈ ಉತ್ಪನ್ನಗಳ ಬೆಲೆ 5 ರೂ.ಗಳಿಂದ ಪ್ರಾರಂಭವಾಗಿ 3 ಸಾವಿರ ರೂ.ಗಳವರೆಗೆ ಇದೆ. 'ಹಸುವಿನ ಸಗಣಿ ಕೇಕ್ ಬೆಲೆ 5 ರೂ ಮತ್ತು ನನ್ನ ಉತ್ಪನ್ನಗಳಲ್ಲಿ ಅತ್ಯಂತ ದುಬಾರಿಯಾದದ್ದು ಬುದ್ಧನ ಪ್ರತಿಮೆ' ಎಂದು ಗಣೇಶನ್ ಹೇಳುತ್ತಾರೆ. ಹೆಚ್ಚಿನ ಉತ್ಪನ್ನಗಳು ಪ್ರದರ್ಶನ ಮಳಿಗೆಗಳಲ್ಲಿ ಮಾರಾಟವಾಗುತ್ತದೆ ಮತ್ತು ಗ್ರಾಹಕರು ಈ ಬಗ್ಗೆ ಉತ್ತಮ ಪ್ರತಿಕ್ರಿಯೆಯನ್ನೂ ವ್ಯಕ್ತಪಡಿಸುತ್ತಿರುವುದು ಗಣೇಶನ್‌ಗೆ ನೆಮ್ಮದಿಯ ಸಂಗತಿ.

ಇಂಥ ವಿಚಾರಗಳನ್ನು ಹೇಳಲೂ ಕಾರಣವಿದೆ. ಕೃಷಿಯಲ್ಲಿದ್ದುಕೊಂಡೇ ಹೊಸದೇನಾದರೂ ಮಾಡಬೇಕೆಂದು ಹಾತೊರೆಯುವ ಮನಸುಗಳಿಗೆ ಒಂದಿಷ್ಟು ಪ್ರೇರಣೆ ಸಿಕ್ಕೀತು. ಮನೆಯ ಅಂದ ಹೆಚ್ಚಿಸಲೆಂದು ಯಾವುದೋ ಪ್ಲಾಸ್ಟಿಕ್ ತೋರಣ, ಅಲಂಕಾರಿಕ ವಸ್ತುಗಳನ್ನು ಬಳಸುವ ಬದಲು, ಮನೆಯ ಪರಿಸರವನ್ನು ಶುದ್ಧಗೊಳಿಸುವ ಇಂತಹ ಗವ್ಯ ಉತ್ಪನ್ನಗಳ ಬಳಕೆಯ ಬಗ್ಗೆ ಕೆಲವೇ ಕೆಲವರಾದರೂ ಮನಸ್ಸು ಮಾಡಿಯಾರೆಂಬುದೊಂದು ಆಶಾಭಾವ.

---

## ದಿಂಗಾಲೇಶ್ವರ ಶ್ರೀ ಹೆಸರಲ್ಲಿ ನಕಲಿ ಫೇಸ್ಬುಕ್ ಐಡಿ: ದೂರು ದಾಖಲು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಜ.ಫಕೀರೇಶ್ವರ ಮಹಾಸಂಸ್ಥಾನ ಮಠದ ಉತ್ತರಾಧಿಕಾರಿ ಜ.ಫ.ದಿಂಗಾಲೇಶ್ವರ ಸ್ವಾಮೀಜಿ ಹೆಸರಿನಲ್ಲಿ ಅಪರಿಚಿತರು ಫೇಸ್ಬುಕ್‌ನಲ್ಲಿ ನಕಲಿ ಐಡಿ ತೆರೆದು, ಅಶ್ಲೀಲ ವಿಡಿಯೋ ಅಪ್‌ಲೋಡ್ ಮಾಡುವುದೂ ಸೇರಿದಂತೆ ಶ್ರೀಮಠಕ್ಕೆ ಧಕ್ಕೆ ತರುವಂತಹ ಕೆಲಸ ಮಾಡುತ್ತಿದ್ದಾರೆ. ಇವರ ಮೇಲೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಶ್ರೀಮಠದ ಆಡಳಿತಾಧಿಕಾರಿ ಶಿರಹಟ್ಟಿ ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ದಿಂಗಾಲೇಶ್ವರ ಶ್ರೀಗಳ ಹೆಸರಿನಲ್ಲಿ ಮೂರು ಫೇಕ್ ಐಡಿಗಳನ್ನು ಸೃಷ್ಟಿಸಿದ್ದಾರೆ.

ಅವುಗಳಲ್ಲಿ ಬರುವ ಯಾವುದೇ ರೀತಿಯ ಸುದ್ದಿಗಳಿಗೆ ಶ್ರೀಗಳಾಗಲೀ ಅಥವಾ ಸಂಸ್ಥಾನ ಮಠಕ್ಕಾಗಲೀ ಯಾವುದೇ ಸಂಬಂಧವಿರುವದಿಲ್ಲ. ಇಲ್ಲಿಯವರೆಗೂ ದಿಂಗಾಲೇಶ್ವರ ಶ್ರೀ ತಮ್ಮ ಅಧಿಕೃತ ಫೇಸ್ಬುಕ್ ಖಾತೆಯನ್ನು ತೆರೆದಿರುವದಿಲ್ಲ.

ಈ ರೀತಿ ಸ್ವಾಮೀಜಿಗಳ ಮತ್ತು ಶ್ರೀಮಠದ ಹೆಸರನ್ನು ದುರ್ಬಳಕೆ ಮಾಡುವವರ ವಿರುದ್ಧ ದೂರು ನೀಡಲಾಗುವುದು ಎಂದು ಆಡಳಿತಾಧಿಕಾರಿ ತಿಳಿಸಿದ್ದಾರೆ.

---

ಚುನಾವಣಾ ಕರ್ತವ್ಯ ಮುಗಿಸಿ ಮಧ್ಯಪ್ರದೇಶದಲ್ಲಿಯೇ ಸಿಲುಕಿದ 4 ಸಾವಿರ ಕನ್ನಡಿಗ ಹೋಂಗಾರ್ಡ್ಸ್

# ತವರಿಗೆ ಮರಳಲು ಸೂಕ್ತ ವ್ಯವಸ್ಥೆ ಕಲ್ಪಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಧ್ಯಪ್ರದೇಶದ ಚುನಾವಣಾ ಕರ್ತವ್ಯಕ್ಕೆಂದು ತೆರಳಿದ್ದ ಲಕ್ಷ್ಮೇಶ್ವರದ 25 ಸಿಬ್ಬಂದಿ ಸೇರಿದಂತೆ ಕರ್ನಾಟಕದ 4 ಸಾವಿರ ಗೃಹರಕ್ಷಕ ಸಿಬ್ಬಂದಿಗಳು ತವರಿಗೆ ಹಿಂದಿರುಗಲಾರದೇ ಸಂಕಷ್ಟದ ಸ್ಥಿತಿಯನ್ನು ಎದುರಿಸುತ್ತಿದ್ದಾರೆ.

ನ. 17 ರಂದು ಮಧ್ಯಪ್ರದೇಶದಲ್ಲಿ ನಡೆದ ಚುನಾವಣೆಯ ಭದ್ರತಾ ಕರ್ತವ್ಯಕ್ಕೆ ನ.13ರಂದು ರಾಜ್ಯದಿಂದ ತೆರಳಿದ ಹೋಂಗಾರ್ಡ್ಸ್‌ಗಳು ನ.20ಕ್ಕೇ ಅಲ್ಲಿಂದ ಹಿಂದಿರುಗಬೇಕಿತ್ತು. ಆದರೆ, ಅಲ್ಲಿನ ಅಧಿಕಾರಿಗಳ ನಡುವೆ ಸಮನ್ವಯದ ಕೊರತೆ ಅಥವಾ ನಿರ್ಲಕ್ಷ್ಯದಿಂದ ತಮ್ಮ ಊರಿಗೆ ಹಿಂದಿರುಗಲು ಪ್ರಯಾಣದ ವ್ಯವಸ್ಥೆ ಮಾಡದೇ ಇರುವುದರಿಂದ ಕಳೆದ ನಾಲ್ಕೈದು ದಿನಗಳಿಂದಲೂ ರೇಲ್ವೆ ನಿಲ್ದಾಣ ಮತ್ತು ಅಕ್ಕಪಕ್ಕದ ಸಾರ್ವಜನಿಕ ಸ್ಥಳದಲ್ಲಿ ಸಮಸ್ಯೆಗಳ ನಡುವೆಯೇ ಸಿಕ್ಕುಬಿದ್ದಿದ್ದಾರೆ.

ಗದಗ, ರಾಯಚೂರ, ಬಳ್ಳಾರಿ, ಬಿಜಾಪುರ ಸೇರಿದಂತೆ ಉತ್ತರ ಕರ್ನಾಟಕದ 2 ಸಾವಿರ, ದಕ್ಷಿಣ ಕರ್ನಾಟಕದ ಭಾಗದ 2 ಸಾವಿರ ಸೇರಿ ಒಟ್ಟೂ 4 ಸಾವಿರ ಕನ್ನಡಿಗ ಹೋಂಗಾರ್ಡ್ಸ್ ಚುನಾವಣಾ ಕರ್ತವ್ಯಕ್ಕೆ ಬಂದಿದ್ದೇವೆ. ನಮಗೆ ನೀಡಿದ ಕರ್ತವ್ಯದ ಆದೇಶದನ್ವಯ ನ.20ಕ್ಕೆ ತವರಿಗೆ ಮರಳಬೇಕಿತ್ತು.

ನಮ್ಮನ್ನು ವಾಪಸ್ ಕರೆಸಿಕೊಳ್ಳುವಲ್ಲಿ ನಮ್ಮ ಜಿಲ್ಲೆ ಮತ್ತು ರಾಜ್ಯದ ಅಧಿಕಾರಿಗಳು ಪ್ರಯತ್ನಪಟ್ಟರೂ ಇಲ್ಲಿನ ಅಧಿಕಾರಿಗಳ ಸಮನ್ವಯ ಕೊರತೆಯಿಂದ ಯಾವುದೇ ಪ್ರಯೋಜನವಾಗಿಲ್ಲ.

ನ.27ಕ್ಕೆ ತೆಲಂಗಾಣದಲ್ಲಿ ನಡೆಯುವ ಚುನಾವಣಾ ಕರ್ತವ್ಯಕ್ಕೆ ಹೋಗಬೇಕಾಗಿದೆ. ನ.22ರ ಬೆಳಿಗ್ಗೆ ಟ್ರೇನ್ ಬರುತ್ತದೆ ಎಂದು ಹೇಳಿದ್ದಾರೆ. ಆದಷ್ಟು ಬೇಗ ನಮ್ಮನ್ನು ರಾಜ್ಯಕ್ಕೆ ಕಳುಹಿಸುವ ಮತ್ತು ಕರೆಸಿಕೊಳ್ಳುವ ಪ್ರಯತ್ನವಾಗಬೇಕು ಎಂದು ರಾಜ್ಯದ ಹೋಂಗಾರ್ಡ್ಸ್ ತಮ್ಮ ಅಳಲನ್ನು ಹಂಚಿಕೊಂಡರು.

ಈ ಕುರಿತು ಗದಗ ಜಿಲ್ಲಾ ಗೃಹರಕ್ಷಕ ದಳದ ಕಮಾಂಡೆಂಟ್‌ರನ್ನು ಸಂಪರ್ಕಿಸಿದಾಗ, ಮಧ್ಯಪ್ರದೇಶದ ಚುನಾವಣಾ ಕರ್ತವ್ಯಕ್ಕೆ ರಾಜ್ಯದಿಂದ ಹೋಗಿದ್ದ ಗೃಹರಕ್ಷಕದಳದ ಸಿಬ್ಬಂದಿಗಳನ್ನು ವಾಪಸ್ ಕರೆಸಿಕೊಳ್ಳುವ ಎಲ್ಲ ಪ್ರಯತ್ನಗಳನ್ನು ಗುರುವಾರ ಸಚಿವರಾದ ಹೆಚ್.ಕೆ. ಪಾಟೀಲರು, ಜಿಲ್ಲಾಧಿಕಾರಿಗಳು ಮತ್ತು ಗೃಹರಕ್ಷಕ ದಳದ ಹಿರಿಯ ಅಧಿಕಾರಿಗಳು ಮಾಡಿದ್ದಾರೆ. ಶುಕ್ರವಾರ ಬೆಳಗಿನ ಜಾವ ವಿಶೇಷ ರೇಲ್ವೆ ವ್ಯವಸ್ಥೆ ಮಾಡಲಾಗಿದೆ. ಸಿಬ್ಬಂದಿಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

---

## ನ.26ರಂದು ಶಾಲಾ ಮಕ್ಕಳಿಗೆ ವಿವಿಧ ಸ್ಪರ್ಧೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ರಾಜ್ಯೋತ್ಸವದ ನಿಮಿತ್ತ ತಾಲೂಕಿನ ವಿವಿಧ ರೈತಪರ ಹಾಗೂ ಕನ್ನಡಪರ ಸಂಘಟನೆಗಳ ಆಶ್ರಯದಲ್ಲಿ ಅಖಂಡ ಕರ್ನಾಟಕದ ಉಳಿವಿಗಾಗಿ ಹಾಗೂ ಕರ್ನಾಟಕ ರಾಜ್ಯ ಇಬ್ಭಾಗದ ಭವಿಷ್ಯ ನುಡಿದಿರುವ ಶಾಸಕ ಡಾ.ಚಂದ್ರು ಲಮಾಣಿಯವರ ಹೇಳಿಕೆ ಖಂಡಿಸಿ ಲಕ್ಷ್ಮೇಶ್ವರದ ಪುರಸಭೆ ಆವರಣದಲ್ಲಿ ನ.26ರಂದು ಬೆಳಿಗ್ಗೆ 10ಕ್ಕೆ ಶಾಲಾ ಮಕ್ಕಳಿಗೆ ರಂಗೋಲಿ, ಸ್ಲೋ ಸೈಕ್ಲಿಂಗ್ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕಾ ಪಕ್ಷಾತೀತ ರೈತಪರ ಹೋರಾಟ ಸಮಿತಿ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ ತಿಳಿಸಿದರು.

ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ರಾಜ್ಯ ಇಬ್ಭಾಗದ ಹೇಳಿಕೆ ನೀಡಿದ ಶಾಸಕರ ವಿರುದ್ಧ ಕ್ರಮಕ್ಕೆ ಡಿ.4ರಂದು ಬೆಳಗಾವಿಯಲ್ಲಿ ನಡೆಯುವ ಅಧಿವೇಶನದಲ್ಲಿ ವಿಧಾನಸಭಾಧ್ಯಕ್ಷರಗೆ ಮನವಿ ಸಲ್ಲಿಸಲಾಗುವುದು. ಕನ್ನಡಪರ ಹೋರಾಟಗಾರರನ್ನು ಸನ್ಮಾನಿಸಲಾಗುವುದು ಎಂದರು.

ಈ ವೇಳೆ ಶಿವಾನಂದ ಲಿಂಗಶೆಟ್ಟಿ, ಖಾನಸಾಬ ಸೂರಣಗಿ, ಆನಂದ ಅಮರಶೆಟ್ಟಿ, ದ್ಯಾಮಣ್ಣ ಕಮತದ ಹನುಮಂತಗೌಡ ಪಾಟೀಲ ಮುಂತಾದವರಿದ್ದರು

---

## 'ದಿಲ್ಲಿ ಚಲೋ' 2ನೇ ಹಂತದ ಚಿತ್ರೀಕರಣ ಮುಕ್ತಾಯ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಾರ್ಸ್ ಸ್ಟುಡಿಯೋ ಪ್ರೊಡಕ್ಷನ್ ಹುಬ್ಬಳ್ಳಿ ಅವರ 'ದಿಲ್ಲಿ ಚಲೋ' ಕನ್ನಡ ಚಲನಚಿತ್ರದ 2ನೇ ಹಂತದ ಚಿತ್ರೀಕರಣ ಮುಕ್ತಾಯಗೊಂಡಿದೆ.

ಹುಬ್ಬಳ್ಳಿ–ಧಾರವಾಡ, ಕೆಲಗೇರಿ, ಹೆಬ್ಬಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಳೆದ 20 ದಿನಗಳ ಕಾಲ ಚಿತ್ರೀಕರಣ ನಡೆಸಿ ಪ್ರಮುಖ ದೃಶ್ಯಗಳನ್ನು ಚಿತ್ರೀಕರಿಸುವದರೊಂದಿಗೆ ಚಿತ್ರದ 2ನೇ ಹಂತದ ಚಿತ್ರೀಕರಣ ಮುಕ್ತಾಯಗೊಂಡಿದೆ. ಹೆಣ್ಣೊಬ್ಬಳು ಮನಸ್ಸು ಮಾಡಿದರೆ ಯಾವೂದೂ ಅಸಾಧ್ಯವಲ್ಲ. ಸ್ತ್ರೀಶಕ್ತಿಯ ಕುರಿತು ಈ ಚಿತ್ರದಲ್ಲಿ ಹೇಳಲಾಗಿದೆ. ಡಿಸೆಂಬರ್ ತಿಂಗಳಲ್ಲಿ ಅಂತಿಮ ಹಂತದ ಚಿತ್ರೀಕರಣ ಮುಗಿಸಿ ಫೆಬ್ರುವರಿಯಲ್ಲಿ ಚಿತ್ರವನ್ನು ರಾಜ್ಯಾದ್ಯಂತ ತೆರೆಗೆ ತರಲಾಗುತ್ತದೆ ಎಂದು ನಿರ್ದೇಶಕ ಶ್ರೀಪಾದ ಹೇಳಿದರು.

ಹಾಸ್ಯನಟ ಟೆನ್ನಿಸ್‌ಕೃಷ್ಣ, ಗಣೇಶ್‌ರಾವ್ ಕೇಸರಕರ, ಅಪೂರ್ವ ಭರಣಿ, ಶ್ರೀಪಾದ ಕುಲಕರ್ಣಿ, ಮಹಾಂತೇಶ ಹಳ್ಳೂರ, ಡಾ. ಶಿವಕುಮಾರ್ ಸ್ವಾಮೀಜಿ, ಸಿದ್ದುಕೃಷ್ಣ ಢೇಕಣೆ, ವಿನಾಯಕ ರುಡ್ನೂರ್, ರಾಜೀವ್‌ಸಿಂಗ್, ರಾಜು ಗಡ್ಡಿ, ಲಕ್ಷ್ಮೀ ಹುಬ್ಬಳ್ಳಿ, ಸುಕನ್ಯಾ, ನೀತಾ ಜಾಧವ್, ಅಮೃತಾ ನಾಯ್ಕ, ನಾರಾಯಣ್ ದೇಸಾಯಿ, ಅನ್ನಪೂರ್ಣಾ ಉಂಡಿ, ಪ್ರಭು ಹಂಚಿನಾಳ, ವೀರನಗೌಡ ಸಿದ್ದಾಪುರ, ಕಿರಣ್ ಸಿದ್ದಾಪುರ, ಮಹಾದೇವ ಸತ್ತಿಗೇರಿ, ಮಂಜುನಾಥ ಹಗೇದಾರ, ಆಸಿಫ್, ರೋಶನ್ ಸಿಂಗ್, ಚಂದ್ರು ದಾಸರ, ಮಾರ್ಝ್ ಸುಲ್ತಾನ್, ಮುತ್ತಪ್ಪ ಪಾಲ್ತಿ, ಆನಂದ್ ಜೋಶಿ ಮೊದಲಾದವರು ಅಭಿನಯಿಸಿದ್ದಾರೆ.

ಓಂ ಪ್ರಕಾಶ್ ಛಾಯಾಗ್ರಹಣ, ಸಿದ್ದು, ಶ್ರೀಪಾದ ಕುಲಕರ್ಣಿ ಸಾಹಿತ್ಯ, ಪ್ರೇಮ್ ಭರತ್ ಸಂಗೀತ, ಅಶೋಕ್ ದೇವ್, ಸ್ಟೈಲ್ ಚಂದ್ರು ಸಾಹಸ, ಪ್ರಕಾಶ್ ಕಮ್ಮಾರ ಪ್ರಸಾದನ, ರೋಹಿತ್ ಪುಣೆ ನೃತ್ಯ, ಶ್ರೀಪಾದ್ ಕೆ, ಅಶೋಕ್‌ದೇವ್ ಕಥೆ–ಸಂಭಾಷಣೆ, ಡಾ.ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ಪತ್ರಿಕಾಸಂಪರ್ಕ, ಅಶೋಕ್‌ದೇವ್ ಸಹನಿರ್ದೇಶನ, ಶಾಮ್‌ಸುಂದರ್ ನಿರ್ವಹಣೆ, ಶ್ರೀಪಾದ ಕುಲಕರ್ಣಿ ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಈ ಚಿತ್ರಕ್ಕೆ, ಸಂಧ್ಯಾ ಜೋಶಿ, ಶ್ರೀಪಾದ ಕುಲಕರ್ಣಿ ನಿರ್ಮಾಪಕರಾಗಿದ್ದಾರೆ.

---

## 'ಕರ್ನಾಟಕ ಸಾಧಕ ರತ್ನ ಪ್ರಶಸ್ತಿ'ಗೆ ಗವಿಶಿದ್ಧಯ್ಯ ಹಳ್ಳಿಕೇರಿಮಠ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಮಹಾದೇವ ಎಜ್ಯುಕೇಷನ್ ಆರ್ಟ್–ಕಲ್ಚರಲ್ ಟ್ರಸ್ಟ್ ಬಳ್ಳಾರಿ ಮತ್ತು ಅಖಿಲ ಕರ್ನಾಟಕ ಕನ್ನಡ ರಾಜ್ಯೋತ್ಸವ ಸಮಿತಿ ಬಳ್ಳಾರಿ ವತಿಯಿಂದ ಕೊಡಮಾಡುವ 'ಕರ್ನಾಟಕ ಸಾಧಕ ರತ್ನ ಪ್ರಶಸ್ತಿ'ಗೆ ಜನಪದ ಸಂಜೀವಿನಿ ಖ್ಯಾತಿಯ ಮುಂಡರಗಿಯ ಗವಿಶಿದ್ಧಯ್ಯ ಜ.ಹಳ್ಳಿಕೇರಿಮಠ ಅವರನ್ನು ಆಯ್ಕೆ ಮಾಡಲಾಗಿದೆ.

ಬಳ್ಳಾರಿಯ ಕೆ.ಸಿ. ರಸ್ತೆಯಲ್ಲಿರುವ ಬಲಿಜ ಭವನದಲ್ಲಿ ನ. 26ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

---

## ಕಾಫಿ ನಾಡಲ್ಲಿ ಕಾಡಾನೆ ದಾಳಿಗೆ ಮತ್ತೊಂದು ಬಲಿ

ಚಿಕ್ಕಮಗಳೂರು : –ಮೂಡಿಗೆರೆ ತಾಲೂಕಿನ ಬೈರಾಪುರ ಗ್ರಾಮದಲ್ಲಿ ಕಾಡಾನೆ ದಾಳಿಗೆ ಆನೆ ನಿಗ್ರಹ ಪಡೆಯ ಸದಸ್ಯನೇ ಬಲಿಯಾದ ಘಟನೆ ಜರುಗಿದೆ. 26 ವರ್ಷದ ಕಾರ್ತಿಕ್‌ಗೌಡ ಮೃತ ದುರ್ದೈವಿಯಾಗಿದ್ದು, ಇಬ್ಬರಿಗೆ ಗಂಭೀರ ಸ್ವರೂಪದ ಗಾಯವಾಗಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆಯಿಂದ ಎರಡು ತಿಂಗಳಲ್ಲಿ ಮೂರು ಜನ ಕಾಡಾನೆ ದಾಳಿಗೆ ಬಲಿಯಾದಂತಾಗಿದೆ. 20 ದಿನಗಳೊಳಗೆ ಕಾಡಾನೆ ದಾಳಿಗೆ ಇಬ್ಬರು ಸಾವನ್ನಪ್ಪಿದ್ದಾರೆ.

ಮೃತ ಕಾರ್ತಿಕ್ ಮೂಡಿಗೆರೆ ತಾಲೂಕಿನ ಗೌಡಹಳ್ಳಿ ನಿವಾಸಿಯಾಗಿದ್ದು, ಸರಕಾರ ರಚಿಸಿದ್ದ ಆನೆ ನಿಗ್ರಹ ಪಡೆಯಲ್ಲಿ ಕೆಲಸ ಮಾಡುತ್ತಿದ್ದರು.

# ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಭೇಟಿ

▶▶ ಮೊದಲನೇ ಪುಟದಿಂದ

ಈ ನಿಟ್ಟಿನಲ್ಲಿ ನಮ್ಮನ್ನು ಕಡೆಗಣಿಸಿರುವುದು ಅಸಮಂಜಸ. ಕೂಡಲೇ ನಮ್ಮ ಸೇವೆಯನ್ನು ಕಾಯಂಗೊಳಿಸಬೇಕು ಎಂದು ಒತ್ತಾಯಿಸಿದರು.

ಸಂಘಟನೆಯ ಹಿರಿಯ ಮುಖಂಡ ಎಂ.ಶಿವಣ್ಣ ಮಾತನಾಡಿ, ಸುಮಾರು ಇಪ್ಪತ್ತು ವರ್ಷಗಳಿಂದ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದು, ಇನ್ನೆರಡು ವರ್ಷ ಕಳೆದರೆ ಅತಿಥಿ ಪಟ್ಟವೂ ಕಳಚುತ್ತದೆ. ಇಷ್ಟು ವರ್ಷ ಸೇವೆ ಸವೆಸಿದರೂ ನಮ್ಮ ಕುಟುಂಬದ ಭವಿಷ್ಯ ಅಭದ್ರವಾಗಿದೆ. ಸರಕಾರ ನಮ್ಮ ಸಮಸ್ಯೆಗೆ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಸಂಘಟನೆಯ ಮಹಿಳಾ ಮುಖಂಡರಾದ ಸಂತೋಷಿ ಬೆಲ್ಲದ್, ವಿದ್ಯಾರ್ಥಿಗಳ ಕಣ್ಣೀರೊರೆಸಬೇಕಾದ ನಾವೇ ಇಂದು ಕಣ್ಣೀರಿನಲ್ಲಿ ಕೈ ತೊಳೆಯುತ್ತಿದ್ದೇವೆ. ಸರಕಾರ ನಮ್ಮ ಸಮಸ್ಯೆಯನ್ನು ಅರ್ಥ ಮಾಡಿಕೊಂಡು ಸ್ಪಂದಿಸಿ, ನ್ಯಾಯ ಒದಗಿಸಬೇಕು ಎಂದು ಅಳಲು ತೋಡಿಕೊಂಡರು.

ಡೊಳ್ಳು ಬಾರಿಸುವ ಮೂಲಕ ಅತಿಥಿ ಉಪನ್ಯಾಸಕರ ಕಾಯಂಗೆ ಸಂಬಂಧಿಸಿದಂತೆ ಸರಕಾರದ ವಿಳಂಬ ನೀತಿ ವಿರೋಧಿಸಿ ಪ್ರತಿಭಟನಾನಿರತರು ಘೋಷಣೆ ಕೂಗಿದರು.

ಈ ಸಂದರ್ಭದಲ್ಲಿ ಸಂಘಟನೆಯ ಮುಖಂಡರಾದ ಡಾ.ಜ್ಞಾನೇಶ್ವರ ಪತ್ತಾರ, ಗಿರಿಜಾ ತುರುಮುರಿ, ಬಸವರಾಜ ಕರುಗಲ್, ಶಿವಬಸಪ್ಪ ಮಸ್ಕಿ, ಡಾ.ಪ್ರಕಾಶ್ ಬಳ್ಳಾರಿ, ಡಾ.ತುಕಾರಾಂ ನಾಯಕ್, ಅಕ್ಕಮಹಾದೇವಿ, ಪ್ರದೀಪ ಪಲ್ಲೇದ್, ಮಹೇಶ ಪೂಜಾರ, ಗೋಣಿಬಸಪ್ಪ, ಮಾರುತಿ, ನವೀನ್, ಗೋಣಿಬಸಪ್ಪ, ಬಿಷ್ಟಪ್ಪ, ವಿಜಯಕುಮಾರ್ ಕೆಂಚಪ್ಪನವರ್, ಪ್ರಕಾಶ ಜಡಿಯವರ್, ವಾಸುದೇವ ಬುರ್ಲಿ, ಸಂತೋಷ್, ಅಮರೇಶ್, ಉಷಾ, ಬಗಾಡೆ, ನಜ್ಮ ಮತ್ತಿತರರು ಇದ್ದರು.

## ಗಾಮನಗಟ್ಟಿಯಲ್ಲಿ ಮಹಾಲಕ್ಷ್ಮೀ ಇಂಪ್ಲಿಮೆಂಟ್ಸ್ ಉದ್ಘಾಟಿಸಿದ ಶ್ರೀ ರಂಭಾಪುರಿ ಜಗದ್ಗುರುಗಳು

# ಅನ್ನ ಕೊಡುವ ರೈತನನ್ನು ಮರೆಯಬೇಡಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಭಾರತ ಕೃಷಿ ಪ್ರಧಾನವಾದ ದೇಶ. ರೈತರ ಶ್ರಮದ ಬದುಕು ಎಲ್ಲರಿಗೂ ಗೊತ್ತಿದೆ. ರೈತ ಅನೇಕ ಸಂಕಷ್ಟಗಳನ್ನು ಎದುರಿಸುತ್ತಿದ್ದು, ಅವುಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಅನ್ನ ಕೊಡುವ ರೈತನನ್ನು ಎಂದಿಗೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಗಾಮನಗಟ್ಟಿ ಕೈಗಾರಿಕಾ ಪ್ರದೇಶದಲ್ಲಿ ಮಹಾಲಕ್ಷ್ಮೀ ಇಂಪ್ಲಿಮೆಂಟ್ಸ್ ಉದ್ಘಾಟಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ಬೇಸಾಯವನ್ನು ಬಳಸಿಕೊಂಡು ಆರ್ಥಿಕ ಗುಣಮಟ್ಟದ ಬೆಳೆ ಬೆಳೆಯಲು ಶ್ರಮಿಸಬೇಕಾಗಿದೆ. ಕೃಷಿಯಲ್ಲಿ ಹೆಚ್ಚಿನ ರಾಸಾಯನಿಕ ಬಳಸುವುದರಿಂದ ಭೂಮಿಯ ಫಲವತ್ತತೆ ಕಡಿಮೆಯಾಗುತ್ತಿದೆ. ಅಲ್ಲದೆ ಹಲವು ರೋಗ-ರುಜಿನಗಳಿಗೆ ಕಾರಣವಾಗುತ್ತಿದೆ. ಆದ್ದರಿಂದ ರೈತರು ಸಾವಯವ ಕೃಷಿಯನ್ನು ಹೆಚ್ಚು ಹೆಚ್ಚಾಗಿ ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಹಿರೇಮಠದ ಗಂಗಯ್ಯ ಮತ್ತು ಚನ್ನಯ್ಯ ಸಹೋದರರು ರೈತರಿಗೆ ಉಪಯುಕ್ತವಾದ ಯಂತ್ರೋಪಕರಣಗಳನ್ನು ನಿರ್ಮಿಸಿ ಅನುಕೂಲ ಕಲ್ಪಿಸಿಕೊಡುತ್ತಿರುವುದು ಸಂತೋಷದ ಸಂಗತಿ. ತಾಯಿ ಸುಶೀಲಮ್ಮ ಅವರು ಮಕ್ಕಳಿಗೆ ಕೊಟ್ಟ ಸಂಸ್ಕಾರ ಮತ್ತು ಕಾಯಕ ಜೀವನದ ಮಹತ್ವ ಅರಿವು ಉಂಟು ಮಾಡಿದ ಪರಿಣಾಮದಿಂದ ಇಂಥ ಪ್ರಗತಿ ಕಾಣಲು ಸಾಧ್ಯವಾಗಿದೆ ಎಂದರು.



ಎಂ.ಚಂದರಗಿ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವವನ್ನು ವಹಿಸಿ ಮಾತನಾಡಿ, ಹಿರೇಮಠದ ಸಹೋದರರು 250ಕ್ಕೂ ಹೆಚ್ಚು ಜಂಗಮ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರ ಹಮ್ಮಿಕೊಂಡು ಇನ್ನಿತರರಿಗೆ ಮಾದರಿಯಾಗಿದ್ದಾರೆ ಎಂದರು.

ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು, ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಅಮ್ಮಿನಭಾವಿ ಅಭಿನವ ಶಾಂತಲಿಂಗ ಶಿವಾಚಾರ್ಯರು, ಬಾಗೋಜಿಕೊಪ್ಪದ ಶಿವಲಿಂಗ ಶಿವಾಚಾರ್ಯರು, ಹನ್ನೆರಡುಮಠದ ರೇವಣಸಿದ್ಧ ಶಿವಾಚಾರ್ಯರು, ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಶ್ರೀ ಮಹಾಲಕ್ಷ್ಮಿ ಇಂಪ್ಲಿಮೆಂಟ್ಸ್ ಸಂಸ್ಥೆಗೆ ಶ್ರೇಯಸ್ಸು ಬಯಸಿದ ಆತ್ಮೀಯ ವಲಯದ ಹತ್ತಾರು ಜನರಿಗೆ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಕೊಡಿಸಿದರು. ವೀರಯ್ಯ ಹಿರೇಮಠ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

ಮಹಾಲಕ್ಷ್ಮೀ ಇಂಪ್ಲಿಮೆಂಟ್ಸ್ ನೂತನ ಕಟ್ಟಡದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳವರು ಸಕಲರ ಕಲ್ಯಾಣಕ್ಕಾಗಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಬಂದ ಭಕ್ತರಿಗೆ ಆಶೀರ್ವದಿಸಿದರು. ಸಮಾರಂಭದ ನಂತರ ಎಲ್ಲ ಸದ್ಭಕ್ತರಿಗೂ ಅನ್ನ ದಾಸೋಹ ನೆರವೇರಿತು.

> ಎಲ್ಲರಂತೆ ರೈತರ ಬಾಳು ಉಜ್ವಲಗೊಳ್ಳಬೇಕೆಂದು ಬಯಸುವುದು ನಿಜ. ಆದರೆ ವಾಸ್ತವಿಕ ಸ್ಥಿತಿಯೇ ಬೇರೆಯಿದೆ. ಶ್ರಮ ವಹಿಸಿ ಬೆಳೆದ ರೈತರ ಬೆಳೆಗಳಿಗೆ ಯೋಗ್ಯ ಬೆಲೆ ಸಿಗಲಾರದೇ ತೊಂದರೆಗೆ ಒಳಗಾಗುತ್ತಿದ್ದಾನೆ. ಅತಿವೃಷ್ಟಿ, ಕೆಲವೊಮ್ಮೆ ಅನಾವೃಷ್ಟಿಯಿಂದ ಬೆಳೆ ನಾಶಗೊಳ್ಳುತ್ತಿರುವುದನ್ನು ಕಾಣುತ್ತೇವೆ. ಮಾಡಿದ ಸಾಲಕ್ಕೆ ಎದೆಗುಂದಿ ಪ್ರಾಣವನ್ನೇ ಕಳೆದುಕೊಂಡ ಎಷ್ಟೋ ರೈತರಿದ್ದಾರೆ. ಅಮೂಲ್ಯ ಜೀವ ಇದ್ದರೆ ಭವಿಷ್ಯತ್ತಿನಲ್ಲಿ ಒಳ್ಳೆಯದನ್ನು ಕಾಣಲಿಕ್ಕೆ ಸಾಧ್ಯವಿದೆ ಎಂಬ ಆಶಾಭಾವ ಇರಬೇಕೇ ಹೊರತು, ಆತ್ಮಹತ್ಯೆಗೆ ಮುಂದಾಗಬಾರದು ಎಂದು ಶ್ರೀಗಳು ಕಿವಿಮಾತು ಹೇಳಿದರು.

# ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಒತ್ತು



■ ವಿಜಯಸಾಕ್ಷಿ ಸುದ್ದಿ, ರೋಣ

ಶಾಲಾ ಮಕ್ಕಳ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಹೇಳಿದರು.

ಅವರು ಗುರುವಾರ ಮಾರನಬಸರಿ ಗ್ರಾ.ಪಂ ವತಿಯಿಂದ ಸಹಿಪ್ರಾ ಶಾಲೆಯಲ್ಲಿ ಜರುಗಿದ ಗ್ರಾ.ಪಂ ಮಟ್ಟದ ಮಕ್ಕಳ ಹಕ್ಕುಗಳ ಗ್ರಾಮ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈಗಾಗಲೇ ಶಾಲಾ ಕಂಪೌಂಡ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಲ್ಲಿ ಗ್ರಾ.ಪಂ ಆಡಳಿತ ಮಂಡಳಿ ಕಾರ್ಯೋನ್ಮುಖವಾಗಿದೆ. ಮುಖ್ಯವಾಗಿ ಕುಡಿಯುವ ನೀರಿನ ನಲ್ಲಿಗಳನ್ನು ಸುಧಾರಿಸಲು ಸೂಚಿಸಿದ್ದು, ಎರಡು ದಿನಗಳಲ್ಲಿ ಸರಿಪಡಿಸಲಾಗುವುದು. ಶಾಲಾ ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದರು.

ಗ್ರಾ.ಪಂ ಸದಸ್ಯ ಶಿವಕುಮಾರ ದಿಂಡೂರ ಮಾತನಾಡಿ, ವಿದ್ಯಾರ್ಥಿಗಳು ಅಕ್ಷರ ಜ್ಞಾನಕ್ಕೆ ಮಹತ್ವ ನೀಡಬೇಕು. ಭಾಷಾ ಜ್ಞಾನ ಅವಶ್ಯಕವಾಗಿದ್ದು, ಎಲ್ಲ ವಿಷಯಗಳ ಬಗ್ಗೆ ತಿಳಿದುಕೊಳ್ಳುವುದು ಉತ್ತಮ ಬೆಳವಣಿಗೆಯಾಗಿದೆ. ಶಾಲಾ ಸುಧಾರಣೆಗೆ ಗ್ರಾ.ಪಂನಿಂದ ಅಗತ್ಯ ನೆರವು ನೀಡಲಾಗುವುದು ಎಂದರು.

ಸಭೆಯಲ್ಲಿ ಭಾಗವಹಿಸಿದ್ದ ಶಾಲಾ ಮಕ್ಕಳು ಚುನಾಯಿತ ಪ್ರತಿನಿಧಿಗಳೊಂದಿಗೆ ಶಾಲಾ ಅಭಿವೃದ್ಧಿಯ ಬಗ್ಗೆ ಚರ್ಚಿಸಿದರು. ಆಟದ ಮೈದಾನ, ಗ್ರಂಥಾಲಯ, ಕುಡಿಯುವ ನೀರಿನ ನಲ್ಲಿಗಳ ಸುಧಾರಣೆ ಸೇರಿದಂತೆ ಉರ್ದು ಶಾಲೆಗೆ ಕಂಪ್ಯೂಟರ್ ಒದಗಿಸಲು ಕ್ರಮತೆಗೆದುಕೊಳ್ಳಿ ಎಂದು ವಿದ್ಯಾರ್ಥಿಗಳು ಒತ್ತಾಯಿಸಿದರು.

ಶಿಕ್ಷಕ ಸಿ.ಕೆ. ಕೇಸರಿ ಮಾತನಾಡಿದರು. ಕೂಡ್ಲೆಪ್ಪ ಹಡಪದ, ವೀರಣ್ಣ ಮೇಟಿ, ಪರಸಪ್ಪ ತಳವಾರ, ಶರಣಪ್ಪ ತಳವಾರ, ಅಶೋಕ ತಳವಾರ, ಬಸವರಾಜ ಮರಡಿ, ಮಂಜುಳಾ ಮಾದರ,

ಉಮಾ ಚಿಗರಿ, ಎಸ್. ಆರ್. ಸಂಕನೂರ, ಬಸವರಾಜ ದೇಸಾಯಿಪಟ್ಟಿ, ಬಾಬಾಜಾನ ಕಳಕಾಪೂರ ಸೇರಿದಂತೆ ಪ್ರೌಢ, ಪ್ರಾಥಮಿಕ, ಉರ್ದು ಶಾಲೆಗಳ ಶಿಕ್ಷಕರು, ಎಸ್‌ಡಿಎಂಸಿ ಸದದಸ್ಯರು, ಅಂಗನವಾಡಿ,ಆಶಾ ಕಾರ್ಯಕರ್ತೆಯರು ಇತರರು ಉಪಸ್ಥಿತರಿದ್ದರು.

# ಮೇಘಾಲಯ ರಾಜ್ಯದ ಗ್ರಂಥಾಲಯ ಸಮಿತಿ ನಿಯೋಗ ಭೇಟಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಅವರನ್ನು ಮೇಘಾಲಯ ರಾಜ್ಯದ ಗ್ರಂಥಾಲಯ ಸಮಿತಿ ನಿಯೋಗದ ಸದಸ್ಯರು ಭೇಟಿಯಾಗಿ ಸನ್ಮಾನಿಸಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರು ಕರ್ನಾಟಕ ವಿಧಾನ ಪರಿಷತ್ತಿನ ಶತಮಾನದ ಇತಿಹಾಸ ನಡೆದು ಬಂದ ದಾರಿಯ ಕುರಿತು ಸುದೀರ್ಘವಾಗಿ ವಿವರಿಸಿದರು. ಕರ್ನಾಟಕದಲ್ಲಿರುವ ಮೇಲ್ಮನೆ, ಕೆಳಮನೆಯ ಮಹತ್ವದ ಕುರಿತು ಮಾಹಿತಿ ನೀಡಿದರು. ವಿಧಾನ ಪರಿಷತ್ತಿನ ಕಾರ್ಯಕಲಾಪಗಳು ನಡೆಯುವ ಸಭಾಂಗಣದ ಕುರಿತು ಮಾಹಿತಿ ನೀಡಿದರು.



ತಮ್ಮ ಕೊಠಡಿಯಲ್ಲಿ ಹಾಕಿದ 12ನೇ ಶತಮಾನದ ಬಸವಣ್ಣನವರ ಅನುಭವ ಮಂಟಪದ ಚಿತ್ರವನ್ನ ತೋರಿಸಿ ನಿಯೋಗದ ಗಮನ ಸೆಳೆದು, ಬಸವಣ್ಣನವರ ಸಂಸತ್ತಿನ ಪರಿಕಲ್ಪನೆ, ಪ್ರಜಾಪ್ರಭುತ್ವದ ಮಹತ್ವದ ಕುರಿತು ಮಾಹಿತಿ ನೀಡಿದರು. ಆಡಳಿತ ವ್ಯವಸ್ಥೆಯನ್ನು ನೋಡಿದಾಗ ಬಸವಣ್ಣನವರು 12ನೇ ಶತಮಾನದಲ್ಲಿಯೇ ಅನುಭವ ಮಂಟಪದ ಮೂಲಕ ಆಡಳಿತ ವ್ಯವಸ್ಥೆಯನ್ನು ಪ್ರಜೆಗಳಿಗಾಗಿಯೇ ಪ್ರಜಾಪ್ರಭುತ್ವ ಅನ್ನುವ ಮಹತ್ವದ ಕುರಿತು ಆಡಳಿತ ವ್ಯವಸ್ಥೆಯನ್ನು ತಂದಿದ್ದರು ಎಂದು ವಿವರಣೆ ನೀಡಿದರು.

ಮೇಘಾಲಯದ ಗ್ರಂಥಾಲಯ ಸಮಿತಿ ನಿಯೋಗವನ್ನು ಸಭಾಪತಿ ಬಸವರಾಜ್ ಹೊರಟ್ಟಿ ಅವರು ಪರಿಷತ್ತಿನ ಪರವಾಗಿ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಹಿರಿಯ ಅಧಿಕಾರಿ ವೃಂದದವರು ಉಪಸ್ಥಿತರಿದ್ದರು.

# ತಿರಕವ್ವ ಪಾಟೀಲ ವಡವಿ ಗ್ರಾ.ಪಂ ಅಧ್ಯಕ್ಷೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ವಡವಿ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷೆಯಾಗಿ ತಿರಕವ್ವ ಫಕೀರಗೌಡ ಪಾಟೀಲ ಆಯ್ಕೆಯಾಗಿದ್ದಾರೆ.

ಆಯ್ಕೆ ಪ್ರಕ್ರಿಯೆಯ ನಂತರ ಮಾತನಾಡಿದ ತಿರಕವ್ವ ಪಾಟೀಲ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ಉಮೇಶಗೌಡ ಪಾಟೀಲ, ಪ್ರೇಮಯ್ಯ ಬಾಳಿಹಳ್ಳಿಮಠ, ರಮೇಶ ಗುಳೇದ, ಅಡಿವೆಪ್ಪ ಗುಡಗೇರ, ಮೌನೇಶ ಬಡಿಗೇರ, ಶ್ರೀಧರ ಹುಲ್ಲೂರ, ಹನಮಪ್ಪ ಭಾವಿ, ತಿರಕಪ್ಪ ಹೊಸಮನಿ, ಶಂಭು ಹುಲ್ಲೂರ, ಬಸವರಾಜ ಬಾಗೇವಾಡಿ, ಬಸವರಾಜ ಹೊಸಮನಿ, ಚಂದ್ರಣ್ಣ ಹುಲ್ಲೂರ, ಅಶೋಕ ಹೊಸಮನಿ, ಬಸವರಾಜ ಭಾವಿ, ರಾಮಣ್ಣ ಕುಬಿಹಾಳ, ಯಲ್ಲಪ್ಪ ಭಾವಿ, ಸುರೇಶ ಹುಲ್ಲೂರ, ಅಶೋಕ ಹುಲ್ಲೂರ, ಮಂಜುನಾಥ ಹುಲ್ಲೂರ, ಪರಸರಡ್ಡಿ ಅಳವಂಡಿ, ಪ್ರವೀಣ ಅಳವಂಡಿ, ಬಸವರಾಜ ಬುರಡಿ, ಅಕ್ಬರ ಹಾರೋಗೇರಿ, ರಾಜೇಸಾಬ ಲಂಗೋಟಿ ಮುಂತಾದವರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದಿಂದ ಪರಿಶಿಷ್ಟ ಜಾತಿಯಲ್ಲಿ ಬರುವ ಮಾದಿಗ, ಚಮ್ಮಾರ, ಡೋರ, ಸಮಗಾರ, ಮೋಚಿ ಜನಾಂಗಕ್ಕೆ ವಿವಿಧ ಯೋಜನೆಗಳಾದ ಕೌಶಲ್ಯ ಅಭಿವೃದ್ಧಿ ತರಬೇತಿ, ಕಾಯಕ ಸ್ಪೂರ್ತಿ, ಕೌಶಲ್ಯ ಉನ್ನತೀಕರಣ, ಪಾದುಕೆ ಕುಟೀರ್, ಚರ್ಮಕಾರರ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ನೇರ ಸಾಲ, ಮಾರುಕಟ್ಟೆ ಸಹಾಯ, ಸ್ವಾವಲಂಬಿ/ಸಂಚಾರಿ ಮಾರಾಟ ಮಳಿಗೆ, ಚರ್ಮಕಾರ ವಸತಿ ಈ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಡಿಸೆಂಬರ್ 19 ಕೊನೆಯ ದಿನವಾಗಿದೆ. ಹೆಚ್ಚಿನ ವಿವರಗಳಿಗಾಗಿ ಲಿಡಕರ್ ಜಿಲ್ಲಾ ಸಂಯೋಜಕರು ಹಾವೇರಿ ಮತ್ತು ಗದಗ ಜಿಲ್ಲೆ ದೂರವಾಣಿ ಸಂಖ್ಯೆ 9900887904 ಸಂಪರ್ಕಿಸಬಹುದಾಗಿದೆ.

# ಬಿಸಿಯೂಟ ತಯಾರಿಕೆಯಲ್ಲಿ ಹೆಚ್ಚಿನ ನಿಗಾ ವಹಿಸಿ

▶▶ ಮೊದಲನೇ ಪುಟದಿಂದ

ಸಹಯೋಗದಲ್ಲಿ ಅಡುಗೆಯವರಿಗೆ ಸುರಕ್ಷತೆ ಮತ್ತು ಸ್ವಚ್ಛತೆ ಕುರಿತು ಜರುಗಿದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡುವ ಕಾರ್ಯಕ್ರಮವು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಮಹಾತ್ವಾಕಾಂಕ್ಷಿ ಯೋಜನೆಯಾಗಿದೆ. ಬಿಸಿಯೂಟದ ಅಡುಗೆಯವರು ಶಿಸ್ತು ಹಾಗೂ ಸ್ವಚ್ಛತೆ ಕಾಯ್ದುಕೊಂಡು ಮಕ್ಕಳಿಗೆ ಬಿಸಿಯೂಟ ತಯಾರಿಸುವಲ್ಲಿ ಹೆಚ್ಚಿನ ನಿಗಾ ವಹಿಸಬೇಕು. ಬಿಸಿಯೂಟ ತಯಾರು ಮಾಡುವ ಸಂದರ್ಭದಲ್ಲಿ ಅನಾಹುತಗಳು ಸಂಭವಿಸದಂತೆ ಮುಂಜಾಗ್ರತೆ ಕೈಗೊಳ್ಳಬೇಕು. ಮಕ್ಕಳಿಗೆ ಶುಚಿ ಹಾಗೂ ರುಚಿಯಾದ ಬಿಸಿಯೂಟ ವಿತರಿಸಿ ಮಕ್ಕಳ ಸ್ನೇಹಿ ವಾತಾವರಣ ಸೃಷ್ಟಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ತರಬೇತಿಯಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ಬಿ. ನಡುವಿನಮನಿ, ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ, ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಎಸ್.ಡಿ. ಕನವಳ್ಳಿ, ಬಿಸಿಯೂಟ ಅಡುಗೆ ತಯಾರುಕರು, ಸಹಾಯಕರು ಹಾಜರಿದ್ದರು.


ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.2/ಟೆಂಡರ/2023-24/**1638**

ದಿನಾಂಕ : 23-11-2023

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

**Standard Bid Document KW-1 & 2 [ಏಕಲಕೋಟಿ ಪದ್ಧತಿ]**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1&2ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಮುಖಾಂತರ 20 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. **ಲೆಕ್ಕ ಶೀರ್ಷಿಕೆ: 2022-23ನೇ ಸಾಲಿನ ಎಂ.ಜಿ.ಎನ್.ಆರ್.ಇ.ಜಿ.ಎ, ಸ್ವಚ್ಛ ಭಾರತ ಮಿಷನ್ ಹಾಗೂ 15ನೇ ಹಣಕಾಸು ಒಗ್ಗೂಡುವಿಕೆ ಯೋಜನೆ ಅಡಿ** ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್**, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

Indent Nos: RDPR/2023-24/WORK_INDENT **: 768, 763, 724, 745, 723, 805, 806, 1131, 1068, 1167, 662, 661, 660, 1175, 1176, 1177, 1191, 1181, 1180, 1346**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.51** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **30.78** ಲಕ್ಷಗಳು

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ** : ಅರ್ಜಿ ಬೆಲೆ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **24-11-2023** ರಿಂದ **08-12-2023** ರಂದು 16.00 ಗಂಟೆಯುವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ : **09-12-2023** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು, ಪಂ.ರಾಜ್. ಇಂಜಿನೀಯರಿಂಗ್ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/313/2023-24


# ಸತತ ಅಧ್ಯಯನವೇ ಯಶಸ್ಸಿಗೆ ಮುನ್ನುಡಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಅಪಾರ ಜ್ಞಾನ ಸಂಪಾದನೆ ಮಾಡಿ, ಭವಿಷ್ಯತ್ತಿನ ಜೀವನವನ್ನು ಉತ್ತಮವಾಗಿ ರೂಪಿಸಿಕೊಳ್ಳಲು ಗಮನಹರಿಸಬೇಕು ಎಂದು ಕಾಲೇಜಿನ ಪ್ರಾಚಾರ್ಯ ಎಸ್. ಎನ್. ಶಿವರಡ್ಡಿ ಹೇಳಿದರು.

ಸ್ಥಳೀಯ ಎಸ್.ಎಂ. ಭೂಮರಡ್ಡಿ ಪದವಿ ಕಾಲೇಜಿನಲ್ಲಿ ನಡೆದ ಸಾಂಘಿಕ, ಸಾಂಸ್ಕೃತಿಕ ಹಾಗೂ ಎನ್‌ಎಸ್‌ಎಸ್ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.



ಎಲ್ಲರನ್ನೂ ಸಮಾನವಾಗಿ ಸ್ವಾಗತಿಸುವ ಕೇಂದ್ರವೆಂದರೆ ಅದು ಶಿಕ್ಷಣ ಕ್ಷೇತ್ರ. ಎಲ್ಲರೂ ಸಮಾನರು, ಎಲ್ಲರಿಗೂ ಸಮಾನ ಅವಕಾಶವನ್ನು ಶಿಕ್ಷಣ ನೀಡುತ್ತದೆ. ಪಟ್ಟಣದ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಪ್ರತಿಭಾವಂತರಾಗಿದ್ದು, ಬಹಳಷ್ಟು ವಿದ್ಯಾರ್ಥಿಗಳು ಉನ್ನತ ಮಟ್ಟದ ಹುದ್ದೆಗಳನ್ನು ಈಗಾಗಲೇ ಅಲಂಕರಿಸಿದ್ದಾರೆ. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಹ ಕಾಲೇಜಿನ ವಿದ್ಯಾರ್ಥಿಗಳು ಸಕ್ರಿಯವಾಗಿದ್ದು, ರಾಜ್ಯಮಟ್ಟದಲ್ಲಿ ಕಾಲೇಜಿನ ಕೀರ್ತಿ ಪತಾಕೆ ಹಾರಿಸಿದ್ದಾರೆ. ವಿದ್ಯಾರ್ಥಿಗಳ ಸತತ ಅಧ್ಯಯನವೇ ಯಶಸ್ಸಿಗೆ ಮುನ್ನುಡಿ ಬರೆಯಲಿದೆ ಎಂದರು.

ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, ವಿದ್ಯಾರ್ಥಿಗಳು ಪದವಿ ಹಂತದಲ್ಲಿ ಪರಿಶ್ರಮದಿಂದ ಅಧ್ಯಯನ ನಡೆಸಿ, ಉತ್ತಮ ಸಾಧನೆ ಮಾಡುವ ಮೂಲಕ ತಂದೆ-ತಾಯಿ ಹಾಗೂ ಕುಟುಂಬದವರ ನಂಬಿಕೆ ಉಳಿಸಬೇಕೇ ವಿನಃ ಚಟಗಳಿಗೆ ಬಲಿಯಾಗಿ ಭವಿಷ್ಯ ಹಾಳು ಮಾಡಿಕೊಳ್ಳಬೇಡಿ ಎಂದು ಕಿವಿಮಾತು ಹೇಳಿದರು.

ಪಿಯು ಕಾಲೇಜಿನ ಪ್ರಾಚಾರ್ಯ ಜೆ.ಬಿ. ಗುಡಿಮನಿ, ಉಪನ್ಯಾಸಕರಾದ ಎಸ್.ಎಸ್. ಚುಂಚಾ, ವಾಯ್.ಎಫ್. ಗೌಡರ, ಎಸ್. ಎಚ್. ಪವಾರ, ಎಲ್.ಕೆ. ವದ್ನಾಳ, ಎಸ್. ಕೆ. ಕಟ್ಟಿಮನಿ, ಎಲ್.ಕೆ. ಹಿರೇಮಠ, ಆರ್. ಎನ್. ಹದ್ಲಿ, ಎಂ.ಎಲ್. ಕ್ವಾಟಿ, ವಿ.ವಿ. ಗಡ್ಡಂ ಹಾಗೂ ಸುವರ್ಣಾ ಪತ್ತಾರ ಮುಂತಾದವರಿದ್ದರು.

# ರಾಜ್ಯ ಮಟ್ಟದ ಯುವ ಸಂಸತ್‌ಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ಎಫ್.ಬಿ. ಪೂಜಾರ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ನವೆಂಬರ್ 18 ರಂದು ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಗಳನ್ನು ನಡೆಸಲಾಗಿದೆ.

ಈ ಸ್ಪರ್ಧೆಯಲ್ಲಿ ಶಿರಹಟ್ಟಿಯ ಸರಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿ ರಮೇಶ ಹಂಪಿಹೊಳಿ – ಪ್ರಥಮ ಸ್ಥಾನ, ಲಕ್ಷ್ಮೇಶ್ವರ ಸರಕಾರಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿನಿ ಮಹಾಲಕ್ಷ್ಮೀ ಮೂಲಿಮನಿ – ದ್ವಿತೀಯ ಸ್ಥಾನ ಪಡೆದುಕೊಂಡು ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಡಿಯಲ್ಲಿ 2023-24ನೇ ಸಾಲಿನ ಉದ್ಯೋಗಿನಿ, ಚೇತನ, ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ https://sevasindhu.karnataka.gov.in ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸಲ್ಲಿಸಲು ಡಿಸೆಂಬರ್ 22 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಉಪನಿರ್ದೇಶಕರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ನೂತನ ಕಟ್ಟಡ ಉದ್ಘಾಟನೆ ಅಂಗವಾಗಿ ಧಾರ್ಮಿಕ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನ.27ರಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಪ್ರತಿಷ್ಠಾನದ ವೀರಭದ್ರಸ್ವಾಮಿ ವಸತಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಜಗದ್ಗುರು ರುದ್ರಮುನೀಶ್ವರ ವಸತಿ ಪ್ರೌಢಶಾಲೆಯ ನೂತನ ಕಟ್ಟಡದ ಉದ್ಘಾಟನೆ ನಡೆಯಲಿರುವ ಹಿನ್ನೆಲೆಯಲ್ಲಿ ಗುರುವಾರ ನೂತನ ಕಟ್ಟಡದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು.

ರಂಭಾಪುರಿ ಪೀಠದ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಅರ್ಚಕ ಸಿದ್ದಲಿಂಗಯ್ಯ ಶಾಸ್ತ್ರಿ ನೇತೃತ್ವದಲ್ಲಿ ಗುರುಕುಲದ ಸಾಧಕರು ಗಣಪತಿ ಹೋಮ, ವಾಸ್ತುಪೂಜೆ, ವಾಸ್ತುಹೋಮ, ಮಕ್ಕಳ ವಿದ್ಯಾಭ್ಯಾಸ ಪ್ರಾಪ್ತಿಗಾಗಿ ದಕ್ಷಿಣಾಮೂರ್ತಿ ಮಂಡಲಾರಾಧನೆ, ದಕ್ಷಿಣಾಮೂರ್ತಿ ಹೋಮ, ಶತಾಕ್ಷರಿ ಸರಸ್ವತಿ ಮಂಡಲಾರಾಧನೆ ಮತ್ತು ಹೋಮ ನೆರವೇರಿಸಿದರು.

ಕಟ್ಟಡದ ಗುತ್ತಿಗೆದಾರ ಬೆಂಗಳೂರು ಎವಿಎಸ್ ಪ್ರಾಜೆಕ್ಟ್‌ನ ಬಾಳಯ್ಯ ಇಂಡಿಮಠ ಉದ್ಘಾಟನಾ ಸಮಾರಂಭದ ಕುರಿತು ಮಾಹಿತಿ ನೀಡಿ, ರಂಭಾಪುರಿ ಪೀಠದ ಆಶ್ರಯದಲ್ಲಿ ನಡೆಯುತ್ತಿರುವ ವಸತಿ ಪ್ರೌಢಶಾಲೆ, ವೀರಭದ್ರಸ್ವಾಮಿ ಪ್ರಾಥಮಿಕ ಶಾಲೆಯ ನೂತನ ಕಟ್ಟಡವನ್ನು ವಿಶೇಷ ತಂತ್ರಜ್ಞಾನಗಳನ್ನು ಬಳಸಿ ನಿರ್ಮಿಸಿದ್ದು, ವಿದ್ಯಾರ್ಥಿಗಳ ಕಲಿಕೆಗೆ ಪೂರಕ ವಾತಾವರಣ ಕಲ್ಪಿಸಲಾಗಿದೆ. ನ.27ರಂದು ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ. ಜಾರ್ಜ್, ಸಚಿವ ಮಧು ಬಂಗಾರಪ್ಪ, ಎಚ್.ಕೆ. ಪಾಟೀಲ್, ಈಶ್ವರ್ ಖಂಡ್ರೆ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ.

ಸಮಾರಂಭವನ್ನು ರಂಭಾಪುರಿ ಜಗದ್ಗುರುಗಳ ಆಶಯದಂತೆ ಅಚ್ಚುಕಟ್ಟಾಗಿ ನೆರವೇರಿಸಲು ಸಕಲ ಸಿದ್ಧತೆ ಕೈಗೊಳ್ಳಲಾಗಿದೆ. ವಿಶಾಲ ವೇದಿಕೆಯನ್ನು ನಿರ್ಮಾಣ ಮಾಡಿ ಸಭಾ ಕಾರ್ಯಕ್ರಮ ನಡೆಸಲಾಗುವುದು ಎಂದು ಮಾಹಿತಿ ನೀಡಿದರು. ಶ್ರೀಪೀಠದ ಅರ್ಚಕರಾದ ಶಿವಪ್ರಕಾಶ್ ಶಾಸ್ತ್ರಿ, ಶಿಕ್ಷಕ ವೀರೇಶ ಕುಲಕರ್ಣಿ ಮತ್ತಿತರರು ಹಾಜರಿದ್ದರು.

### ಪದವಿಪೂರ್ವ ಶಿಕ್ಷಣ ಇಲಾಖೆಯ ಅಸ್ಮಿತೆಯಲ್ಲಿ ಯಥಾಸ್ಥಿತಿ ಕಾಪಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ

# ಇಲಾಖೆಯನ್ನು ಹಂತ ಹಂತವಾಗಿ ಕೊಲ್ಲುವ ಪ್ರಯತ್ನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ ಗದಗ, ರಾಜ್ಯ ಪ.ಪೂ ಕಾಲೇಜುಗಳ ಉಪನ್ಯಾಸಕರ ಸಂಘದ ಜಿಲ್ಲಾ ಶಾಖೆ, ಕರ್ನಾಟಕ ರಾಜ್ಯ ಪ.ಪೂ ಮಹಾವಿದ್ಯಾಲಯಗಳ ನೌಕರರ ಸಂಘ ಧಾರವಾಡ, ರಾಜ್ಯ ಪ.ಪೂ ಶಿಕ್ಷಣ ಇಲಾಖೆ ಬೋಧಕೇತರ ನೌಕರರ ಸಂಘದ ಜಿಲ್ಲಾ ಶಾಖೆ ವತಿಯಿಂದ ಗುಣಾತ್ಮಕ ಮತ್ತು ಸ್ಪರ್ಧಾತ್ಮಕ ಶಿಕ್ಷಣಕ್ಕೆ ದೇಶದಲ್ಲಿಯೇ ಮಾದರಿಯಾದ ಪದವಿಪೂರ್ವ ಶಿಕ್ಷಣ ಇಲಾಖೆಯ ಅಸ್ಮಿತೆಯಲ್ಲಿ ಯಥಾಸ್ಥಿತಿ ಕಾಪಾಡುವಂತೆ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಎಂ.ಸಿ. ಕಟ್ಟಿಮನಿ ಮಾತನಾಡಿ, ಕೊಠಾರಿ ಆಯೋಗದ ಶಿಫಾರಸ್ಸಿನಂತೆ +2 ಹಂತವನ್ನು ರಾಜ್ಯದಲ್ಲಿ ಅಳವಡಿಸುವ ಸಲುವಾಗಿ ಪಿ.ಮಲ್ಲಿಕಾರ್ಜುನಪ್ಪನವರ ನೇತೃತ್ವದ ಸಮಿತಿಯು ನೀಡಿದ ವರದಿಯ ಆಧಾರದ ಮೇಲೆ 1971ರ ಜನವರಿಯಲ್ಲಿ ಪ.ಪೂ ಶಿಕ್ಷಣ ಮಂಡಳಿಯು ಅಸ್ತಿತ್ವಕ್ಕೆ ಬಂದಿತು. ಎಸ್.ಬಂಗಾರಪ್ಪ ಹಾಗೂ ವೀರಪ್ಪ ಮೊಯ್ಲಿ ಅವರ ದೂರದೃಷ್ಟಿಯ ಫಲವಾಗಿ ಪ.ಪೂ ಶಿಕ್ಷಣ ಇಲಾಖೆ ರೂಪುಗೊಂಡಿತು. ಹೀಗೆ ರೂಪುಗೊಂಡ ಇಲಾಖೆಯು ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣ ಹಂತಗಳ ನಡುವೆ ಒಂದು ಸೇತುವಾಗಿ ಗುಣಾತ್ಮಕ ಹಾಗೂ ಸ್ಪರ್ಧಾತ್ಮಕ ಶಿಕ್ಷಣವನ್ನು ವಿದ್ಯಾರ್ಥಿಗಳಿಗೆ ನೀಡುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಹೀಗೆ ತನ್ನದೇ ಆದ ಶೈಕ್ಷಣಿಕ ಮೌಲ್ಯ ಮತ್ತು ಅಸ್ಮಿತೆಯನ್ನು ಹೊಂದಿರುವ ಇಲಾಖೆಯನ್ನು ಹಂತ ಹಂತವಾಗಿ ಕೊಲ್ಲುವ ಪ್ರಯತ್ನಗಳು ನಡೆಯುತ್ತಿರುವುದು ದುರಾದೃಷ್ಟಕರ ಎಂದರು.




> ಈ ವಿಷಯಗಳಲ್ಲಿ ಸರ್ಕಾರ ಸಕಾಲದಲ್ಲಿ ಸಕಾರಾತ್ಮಕವಾಗಿ ಸ್ಪಂದಿಸದೇ ಹೋದಲ್ಲಿ ಕರ್ನಾಟಕ ರಾಜ್ಯ ಪ.ಪೂ ಕಾಲೇಜುಗಳ ಪ್ರಾಂಶುಪಾಲರ ಸಂಘ, ಉಪನ್ಯಾಸಕರ ಸಂಘ ಮತ್ತು ಬೋಧಕೇತರ ಸಂಘಗಳ ಒಕ್ಕೂಟವು ಮುಂಬರುವ ಡಿಸೆಂಬರ್ 1ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಬೃಹತ್ ಪ್ರತಿಭಟನೆಯನ್ನು ನಡೆಸಲು ನಿರ್ಧರಿಸಿದೆ ಎಂದು ಮನವಿಯ ಮೂಲಕ ತಿಳಿಸಿದರು.

ಎಸ್.ಎಸ್. ಸೋಮಣ್ಣವರ ಮಾತನಾಡಿ, ಕರ್ನಾಟಕ ಪಬ್ಲಿಕ್ ಸ್ಕೂಲ್ ಹೆಸರಿನಲ್ಲಿ ಪಿಯು ಹಂತವನ್ನು ಪ್ರೌಢಶಾಲೆಗಳಲ್ಲಿ ವಿಲೀನಗೊಳಿಸುವ ಪ್ರಕ್ರಿಯೆ ಹಿಂದಿನಿಂದಲೂ ನಡೆಯುತ್ತಿದೆ. ಇದನ್ನು ಕೂಡಲೇ ಕೈಬಿಟ್ಟು ಪದವಿ ಪೂರ್ವ ಶಿಕ್ಷಣ ಇಲಾಖೆ ಎಂಬ ಹೆಸರನ್ನೇ ಹಿಂದಿನಂತೆ ಯಥಾಸ್ಥಿತಿಯಲ್ಲಿಯೇ ಇರಿಸಬೇಕು ಎಂದರು.

ಎನ್.ಎಂ. ಪವಾಡಿಗೌಡ್ರ ಮಾತನಾಡಿ, ಏಕಾಏಕಿ ಪಿಯು ವಿದ್ಯಾರ್ಥಿಗಳಿಗೆ ಮೂರು ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಿರುವುದು ಸಂಪೂರ್ಣ ಅವೈಜ್ಞಾನಿಕ ಮತ್ತು ಅತಾರ್ಕಿಕ ನಿರ್ಧಾರವಾಗಿದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವ ಕುಸಿಯುವುದು ಮಾತ್ರವಲ್ಲ, ಓದಿನ ಬಗೆಗೆ ತಾತ್ಸಾರವನ್ನು ಬೆಳೆಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎ.ಬಿ. ಕಟಗಿ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರಾದ ಶ್ರೀಶೈಲ ಬೀರಕಬ್ಬಿ, ಕ.ರಾ.ಪ.ಪೂ. ಶಿವಬಸವ ಸೋಮನಕಟ್ಟಿ ಶಿಕ್ಷಣ ಇಲಾಖೆ ಬೋಧಕೇತರ ನೌಕರರ ಸಂಘ ಗದಗ ಶಾಖೆಯ ಅಧ್ಯಕ್ಷರು, ಎಂ.ಕೆ. ಲಮಾಣಿ ಎಸ್.ಐ. ಮೇಟಿ, ಜಿ.ಬಿ. ಗುಡಿಮನಿ, ಆರ್.ಮರಾಠಿ, ಸಿ.ಎಸ್. ತೋಟಿ, ಎ.ಎ. ಹದ್ಲಿ, ಎ.ಎಂ. ಅಂಗಡಿ, ಎಸ್.ವ್ಹಿ. ವೇರ್ಣೇಕರ, ಎಸ್.ಎನ್. ಚವ್ಹಾಣ, ಎಂ.ಸಿ. ಹಿರೇಮಠ, ಎಂ.ಎಚ್. ಜೋಗಿನ, ಎಂ.ಎನ್. ನಿಶಾನದಾರ, ವ್ಹಿ.ಆರ್. ಪಲ್ಲೇದ, ಎಸ್.ಎಂ. ಮುಲ್ಲಾ, ಎಂ.ಸಿ. ಹಿರೇಮಠ, ಎಂ.ಪಿ. ಮುಂಟೂರ, ಆರ್.ಎಂ. ಬಡಿಗೇರ, ಆರ್.ಎಸ್. ಚವಡಿ, ಎಂ.ಡಿ. ಮಡಿವಾಳರ, ಎಂ.ಎಸ್. ಮುಲ್ಲಾ, ಎಸ್.ಎಂ. ಮಠ ಮುಂತಾದವರಿದ್ದರು.

### ಕನಕದಾಸ ಜಯಂತಿ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ

# ಕನಕದಾಸ ಜಯಂತಿ ಯಶಸ್ವಿಗೊಳಿಸೋಣ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕನಕದಾಸ ಜಯಂತಿ ಆಚರಿಸುವ ಹಿನ್ನೆಲೆಯಲ್ಲಿ ತಹಸೀಲ್ದಾರ್ ಕಚೇರಿಯಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ತಾಲೂಕಿನ ಹಾಲುಮತ ಸಮಾಜದ ಮುಖಂಡರು ಭಾಗವಹಿಸಿ, ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಲಹೆ ನೀಡಿದರು.



ತಹಸೀಲ್ದಾರ್ ಕಿರಣ ಕುಮಾರ ಕುಲಕರ್ಣಿ ಅಧ್ಯಕ್ಷತೆಯಲ್ಲಿ ಮಾತನಾಡಿದ ಸಮಾಜದ ಮುಖಂಡರು, ತಹಸೀಲ್ದಾರ್ ಕಚೇರಿಯಲ್ಲಿ ಅರ್ಥಪೂರ್ಣವಾಗಿ ಹಾಗೂ ಅದ್ಧೂರಿಯಾಗಿ ಆಚರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ವಿವಿಧ ಗಣ್ಯರು ಹಾಗೂ ಸಮಾಜದ ಮುಖಂಡರನ್ನು ಆಹ್ವಾನಿಸಿ ಸಂಭ್ರಮದಿಂದ ಜಯಂತಿ ಆಚರಿಸೋಣ. ಈ ನಿಟ್ಟಿನಲ್ಲಿ ತಾಲೂಕಾಡಳಿತವು ಸಂಭ್ರಮದ ಕನಕದಾಸ ಜಯಂತಿ ಆಚರಣೆಗೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಸಮಾಜದ ಮುಖಂಡರ ಸಲಹೆ-ಸೂಚನೆಗಳನ್ನು ಆಲಿಸಿದ ಬಳಿಕ ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, ಕನಕದಾಸರ ಕೀರ್ತನೆಗಳು ಕೂಡಿ ಬಾಳುವುದು ಸ್ವರ್ಗ ಸಮಾನ ಎಂಬ ಸಂದೇಶಗಳನ್ನು ನೀಡುತ್ತವೆ. ಇಂತಹ ಶ್ರೇಷ್ಠ ಕೀರ್ತನೆಕಾರ ಕನಕದಾಸರ ಜಯಂತಿಯನ್ನು ಈ ಬಾರಿ ಗದಗ ಜಿಲ್ಲೆಯಲ್ಲಿ ಸರ್ಕಾರವು ಅದ್ದೂರಿಯಾಗಿ ಆಚರಿಸುವ ಚಿಂತನೆಯಲ್ಲಿದೆ. ಹೀಗಾಗಿ ತಹಸೀಲ್ದಾರ್ ಕಚೇರಿಯಲ್ಲಿ ಸರಳವಾಗಿ ಕನಕದಾಸ ಜಯಂತಿ ಕಾರ್ಯಕ್ರಮವನ್ನು ಆಚರಿಸಿ, ಜಿಲ್ಲೆಯಲ್ಲಿ ನಡೆಯುವ ರಾಜ್ಯ ಮಟ್ಟದ

ಕನಕದಾಸ ಜಯಂತಿಯಲ್ಲಿ ಎಲ್ಲರೂ ಪಾಲ್ಗೊಂಡು ಕಾರ್ಯಕ್ರಮವನ್ನು ಯಶ್ವಸಿಗೊಳಿಸೋಣ ಎಂದರು.

ತಹಸೀಲ್ದಾರರ ಮಾತಿಗೆ ಸಮಾಜದ ಮುಖಂಡರು ಸಮ್ಮತಿ ವ್ಯಕ್ತಪಡಿಸಿದರು. ಕರ್ನಾಟಕ ಪ್ರದೇಶ ಕುರುಬರ ಸಂಘದ ತಾಲೂಕಾಧ್ಯಕ್ಷ ಶರಣಪ್ಪ ದೊಣ್ಣೆಗುಡ್ಡ, ಗಜೇಂದ್ರಗಡ ತಾಲೂಕಾ ಕುರುಬರ ಸಂಘದ ಅಧ್ಯಕ್ಷ ಅಂದಪ್ಪ ಬಿಚ್ಚೂರ, ಪ್ರಧಾನ ಕಾರ್ಯದರ್ಶಿ ಕೆ.ಎಸ್. ಕೊಡತಗೇರಿ ಮಾತನಾಡಿದರು.

ಸಮಾಜದ ಮುಖಂಡರಾದ ವಿರೂಪಾಕ್ಷಪ್ಪ ಕರಿಹೊಳಿ, ಷಣ್ಮುಖಪ್ಪ ಕರಡಿ, ಕಳಕನಗೌಡ ಗೌಡ್ರ, ಶಂಕರಪ್ಪ ಗುರಿಕಾರ, ಸಂತೋಷ ಅಬ್ಬಿಗೇರಿ, ಯಲ್ಲಪ್ಪ ವದೆಗೋಳ, ಎಂ.ಬಿ. ಸೋಂಪುರ, ರಂಗನಾಥ ಮೇಟಿ ಮುಂತಾದವರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಸಾಹಿತಿ ಸಿ.ಜಿ. ಹಿರೇಮಠ ಮಾಹಿತಿ

# 'ಅನುಭಾವ ಶರಧಿ' ಕೃತಿ ಲೋಕಾರ್ಪಣೆ ನ.26ಕ್ಕೆ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು ಕೂಡ ಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿ, ಸ್ವತಂತ್ರವಾಗಿ ಅನೇಕ ಕೃತಿಗಳನ್ನು ನಾಡಿಗೆ ನೀಡಿದ್ದಾರೆ. ಅಂತಹ ಮಹಿಳಾ ಸಾಹಿತಿಗಳಲ್ಲಿ ಓರ್ವರಾದ ಶಿಕ್ಷಕಿ ಮೈತ್ರಾದೇವಿ ರಾಚಯ್ಯ ಹಿರೇಮಠ ಅವರು ರಚಿಸಿದ 'ಅನುಭಾವ ಶರಧಿ' ಎನ್ನುವ ವಚನಗಳು ಇಂದಿನ ದಿನಮಾನಕ್ಕೆ ಹೊಂದಿಕೊಂಡಂತಿದ್ದು, ಈ ಕೃತಿಯ ಲೋಕರ್ಪಣೆ ಕಾರ್ಯಕ್ರಮ ನ.26ರಂದು ಎಸ್‌ಬಿಐ ಮೊದಲ ಮಹಡಿಯಲ್ಲಿ ನಡೆಯದಿದೆ ಎಂದು ಸಾಹಿತಿ ಸಿ.ಜಿ. ಹಿರೇಮಠ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿ, ಮೈತ್ರಾದೇವಿ ರಚಿಸಿದ ಅನೇಕ ಕವಿತೆ, ವಚನಗಳು, ಲೇಖನಗಳು ಹಲವಾರು ಪತ್ರಿಕೆಗಳಲ್ಲಿ ಪ್ರಕಟವಾಗಿವೆ. ಇಂತಹ ಸಾಹಿತಿಗಳಿಗೆ ಪ್ರೋತ್ಸಾಹ ನೀಡುವ ಕಾರ್ಯವಾದಲ್ಲಿ ಸಮಾಜವುಖಿಂರಾದ ಅನೇಕ ಕೃತಿಗಳನ್ನು ಇವರಿಂದ ನಿರೀಕ್ಷಿಸಬಹುದು ಎಂದರು.

ಮೈತ್ರಾದೇವಿ ಹಿರೇಮಠ ಮಾತನಾಡಿ, ತಂದೆ-ತಾಯಿಯವರಿಂದ ಬಂದ ಬಳುವಳಿ ನನ್ನ ಈ ವಚನ ಸಾಹಿತ್ಯಕ್ಕೆ ಸ್ಫೂರ್ತಿ. ವಚನದ ಮಹತ್ವ, ಅದರಲ್ಲಿರುವ ಸಾಮಾಜಿಕ ಕಳಕಳಿ ನನ್ನ ಈ ವಚನ ರಚನೆಗೆ ಸಾಕ್ಷಿ. ಕೃತಿ ಬಿಡುಗಡೆ ಕಾರ್ಯಕ್ರಮದ ಸಾನ್ನಿಧ್ಯವನ್ನು ಮೈಸೂರು ಬನ್ನಿಕೊಪ್ಪ ಜಪದಕಟ್ಟಿ ಮಠದ ಡಾ.ಸುಜ್ಞಾನದೇವ ಶಿವಾಚಾರ್ಯ ಮಹಾಸ್ವಾಮಿಗಳು, ಅಧ್ಯಕ್ಷತೆಯನ್ನು ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ವಹಿಸಲಿದ್ದು, ಉದ್ಘಾಟನೆಯನ್ನು ಶಾಸಕ ಡಾ. ಚಂದ್ರು ಲಮಾಣಿ ನೆರವೇರಿಸಲಿದ್ದಾರೆ. ಕೃತಿ ಲೋಕಾರ್ಪಣೆಯನ್ನು ಹಾನಗಲ್ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ಸಾಲಿಮಠ ಹಾಗೂ ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಮಾಡಲಿದ್ದಾರೆ.

ಪುಸ್ತಕ ಪರಿಚಯವನ್ನು ಕೆ.ಎ. ಬಳಿಗಾರ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಎಂ.ಬಿ. ಹೊಸಮನಿ, ಈಶ್ವರ ಮೆಡ್ಲೇರಿ, ನಾಗರಾಜ ಹುಣಸಿಕಟ್ಟಿ, ಗಣಪತಿ ಹೆಗಡೆ, ಅನ್ನಪೂರ್ಣ ಹಿರೇಮಠ, ನಿರ್ಮಲಾ ಅರಳಿ, ಭುವನಾ ಹಿರೇಮಠ, ಸಿ.ಶಿವಾನಂದ, ಕೆ.ಎರಿಬಸಪ್ಪ, ಪಂಚಾಕ್ಷರಯ್ಯ ಸಾಲಿಮಠ ಆಗಮಿಸಲಿದ್ದು, ಸಾಹಿತ್ಯಾಮಾನಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಂರುಲ್ಲಿ ಪಂಚಾಕ್ಷರಯ್ಯ ಸಾಲಿಮಠ, ಎಸ್.ಬಿ. ಅಣ್ಣಿಗೇರಿ, ಮಂಜುನಾಥ ಚಾಕಲಬ್ಬಿ, ಎ.ಎಂ. ಕುಂಬಾರ, ಎಂ.ಬಿ. ಹೊಸಮನಿ, ನಿರ್ಮಲಾ ಅರಳಿ ಮುಂತಾದವರು ಇದ್ದರು.

### ನಿಲ್ದಾಣಕ್ಕಾಗಮಿಸದೇ ಬೈಪಾಸ್‌ನಲ್ಲಿಯೇ ಸಂಚರಿಸುವ ಬಸ್‌ಗಳು । ವಿದ್ಯಾರ್ಥಿಗಳಿಂದ ಪ್ರತಿಭಟನೆ

# ಸಾರಿಗೆ ಸಂಸ್ಥೆಯ ವಿರುದ್ಧ ವಿದ್ಯಾರ್ಥಿಗಳ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಾಯವ್ಯ ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಗಳ ಬಸ್‌ಗಳು ಲಕ್ಕುಂಡಿ ಬಸ್ ನಿಲ್ದಾಣಕ್ಕೆ ಬರದೇ ಬೈಪಾಸ್ ರಸ್ತೆಯಲ್ಲಿಯೇ ಸಂಚರಿಸುವುದನ್ನು ವಿರೋಧಿಸಿ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಗುರುವಾರ ಬಸ್‌ಗಳನ್ನು ತಡೆದು ಪ್ರತಿಭಟನೆ ನಡೆಸಿದರು.



> ಗುರುವಾರ ಮುಂಜಾನೆ 8ರಿಂದಲೇ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳು ಸಾರಿಗೆ ಸಂಸ್ಥೆಯ ಅಧಿಕಾರಿಗಳ ದಾರಿ ಕಾಯುತ್ತಿದ್ದರು. ಆದರೆ ಅಧಿಕಾರಿಗಳು 11 ಗಂಟೆಗೆ ಆಗಮಿಸಿ ಭರವಸೆ ನೀಡಿದ್ದರಿಂದ ವಿದ್ಯಾರ್ಥಿಗಳು 12.30ಕ್ಕೆ ಶಾಲೆಗೆ ತಲುಪಬೇಕಾಯಿತು ಎಂದು ವಿದ್ಯಾರ್ಥಿಗಳಾದ ಪವಿತ್ರಾ, ಸಂತೋಷ, ಕೊಟ್ರೇಶ, ನೀಲಮ್ಮ ಮುಂತಾದವರು ಅಧಿಕಾರಿಗಳ ಮೇಲೆ ಆಕ್ರೋಶ ವ್ಯಕ್ತಪಡಿಸಿದರು.

ಮುಂಜಾನೆ 8ರಿಂದಲೇ ಆರಂಭವಾದ ಪ್ರತಿಭಟನೆಯಲ್ಲಿ ರಾಷ್ಟ್ರೀಯ ಹೆದ್ದಾರಿಯ ಬೈಪಾಸ್‌ನಲ್ಲಿ ಸಂಚರಿಸುತ್ತಿದ್ದ 15ಕ್ಕೂ ಹೆಚ್ಚು ಬಸ್‌ಗಳನ್ನು ತಡೆದು, ನಿಲ್ದಾಣಕ್ಕೆ ಕರೆತಂದು ಸಾರಿಗೆ ಸಂಸ್ಥೆಯ ಅಧಿಕಾರಿಗಳ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಆಕ್ರೋಶ ವ್ಯಕ್ತಪಡಿಸಿದರು.

ಕೆಲಹೊತ್ತು ಚಾಲಕ, ನಿರ್ವಾಹಕರ ನಡುವೆ ವಾಗ್ವಾದವೂ ನಡೆಯಿತು.

ಈ ಸಮಯದಲ್ಲಿ ಪೊಲೀಸರು ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವಂತೆ ಪ್ರತಿಭಟನಾಕಾರರನ್ನು ಎಚ್ಚರಿಸಿದರು. ಇದರಿಂದ ಇನ್ನಷ್ಟು ಆಕ್ರೋಶಗೊಂಡ ಪ್ರತಿಭಟನಾಕಾರರು ಸಾರಿಗೆ ಸಂಸ್ಥೆ ಹಾಗೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯಿಂದ ಕೊಪ್ಪಳ, ಹುಬ್ಬಳ್ಳಿ, ಹೊಸಪೇಟೆ, ಬಳ್ಳಾರಿ, ರಾಯಚೂರು, ಬೆಳಗಾವಿ, ಹಾವೇರಿ ಸೇರಿದಂತೆ ವಿವಿಧ ಗ್ರಾಮಗಳಿಗೆ ತೆರಳಬೇಕಾದ ಪ್ರಯಾಣಿಕರು ತೊಂದರೆ ಪಡುವಂತಾಯಿತು. ಕಳೆದ ಎರಡು ವರ್ಷದ ಹಿಂದೆಯೇ ಬೈಪಾಸ್ ರಸ್ತೆ ನಿರ್ಮಾಣವಾಗಿದೆ. ಅಂದಿನಿಂದಲೇ ವಾಯವ್ಯ ಮತ್ತು ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳು ಲಕ್ಕುಂಡಿ ನಿಲ್ದಾಣಕ್ಕೆ ಬರದೇ ಬೈಪಾಸ್‌ನಲ್ಲಿ ಸಂಚರಿಸುತ್ತಾ ಬಂದವು.

ಇದರಿಂದ ಶಾಲಾ-ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ತೊಂದರೆ ಅನಭವಿಸುವಂತಾಗಿದೆ ಎಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಯುವ ಮುಖಂಡ ಮರಿಯಪ್ಪ ವಡ್ಡರ, ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಸಂಚಾಲಕ ಬಸವರಾಜ ಮುಳ್ಳಾಳ, ಅಶೋಕ ಮೇಟಿ ತಿಳಿಸಿದರು.

ವಿದ್ಯಾರ್ಥಿಗಳಿಗೆ ಅನುಕೂಲ ವಾಗುವ ಸಮಯದಲ್ಲಿ ಸಮರ್ಪಕವಾಗಿ ಬಸ್‌ಗಳನ್ನು ಓಡಿಸಲಾಗುವುದು ಮತ್ತು ಬೈಪಾಸ್‌ನಲ್ಲಿ ಸಂಚರಿಸುವ ಬಸ್‌ಗಳ ಮೇಲೆ ನಿಗಾ ವಹಿಸಲು ಸಂಚಾರಿ ನಿಯಂತ್ರಕ ಹಾಗೂ ತನಿಖಾ ದಳವನ್ನು ನೇಮಿಸಿ ಚಾಲಕ ಮತ್ತು ನಿರ್ವಾಹಕರ ಮೇಲೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಸಾರಿಗೆ ನಿಯಂತ್ರಣಾಧಿಕಾರಿ ಡಿ.ಐ. ಬಸವಂತಪೂರ ಹಾಗೂ ಗದಗ ಬಸ್ ನಿಲ್ದಾಣದ ನಿಯಂತ್ರಕ ಎಸ್.ಕೆ. ಅಯ್ಯನಗೌಡ್ರ ಭರವಸೆ ನೀಡಿದರು.

ಪ್ರಕಾಶ ಅರಹುಣಶಿ, ಈರಣ್ಣ ಮುಸ್ಕಿನಭಾವಿ, ಮೃತ್ಯುಂಜಯ ನಡುವಿನಮಠ, ಈರಣ್ಣ ಜಕ್ಕಲಿ, ಬಸವರಾಜ ಕವಲೂರು, ಅಶೋಕ ಮೇಟಿ, ವಿನಾಯಕ ಡಿಗ್ಗಾವಿ, ಈರಣ್ಣ ಅರಹುಣಶಿ, ಕೊಟ್ರಪ್ಪ ಕವಲೂರ, ಉಮೇಶ ಬಂಡಿ, ನಾಗಪ್ಪ ಕುಂಬಾರ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅತಿಥಿ ಉಪನ್ಯಾಸಕರಿಂದ ಅನಿರ್ದಿಷ್ಟಾವಧಿ ಧರಣಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡದ ಉನ್ನತ ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರ ಕಚೇರಿ ಎದುರು ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರು ತಮ್ಮ ಸೇವಾ ಖಾಯಂಗಾತಿಗಾಗಿ ಆಗ್ರಹಿಸಿ ತರಗತಿ ಬಹಿಷ್ಕರಿಸಿ, ಗುರುವಾರ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಿದರು.




ಈ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ.ಹನುಮಂತಗೌಡ ಆರ್.ಕಲ್ಮನಿ ಮಾತನಾಡಿ, ಹಲವಾರು ವರ್ಷಗಳಿಂದ ಅತಿಥಿ ಉಪನ್ಯಾಸಕರು ಸೇವೆ ಸಲ್ಲಿಸುತ್ತಿದ್ದಾರೆ. ಸರ್ಕಾರ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿದವರನ್ನು ಖಾಯಂ ನೇಮಕಗೊಳಿಸಿದೆ. ಅಂತೆಯೇ ಉನ್ನತ ಶಿಕ್ಷಣ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ರಾಜ್ಯ ಕಾರ್ಯದರ್ಶಿ ಡಾ.ವಿನೋದ ಚೆಂದ, ಪೀಟರ್, ಡಾ. ನಾಗರಾಜ್ ಯಮನೂರ, ಡಾ. ಆರ್.ಎಚ್. ತಿಗಡಿ, ರಾಮಕೃಷ್ಣ ಹೆಗಡೆ, ಡಾ.ಎಂ. ಜಂಗವಾಡ, ಡಾ. ವಿರುಪಾಕ್ಷಿ ಮುಳಗುಂದ, ಕೃಷ್ಣಾ ಬೆಂತೂರ, ಲೀಲಾವತಿ ಹಿರೇಮಠ, ದಾನೇಶ್ವರಿ ಗುಡ್ಡದ, ದಿವ್ಯಾ ಪರಾಡ್ಡೆ, ಶಿಲ್ಪಾ ಹಿರೇಮಠ, ಡಾ. ಪರಿಮಳಾ ದೇಶಪಾಂಡೆ, ಭಾರತಿ ಇಜಾರೆ, ಎಸ್.ಎಸ್. ಸರ್ವಿ, ಮಾಹಾತೇಂಶ ಕಲ್ವಾಡ, ಡಾ.ಸೊಪ್ಪಿಮಠ, ಡಾ.ಸತರಡ್ಡಿ, ದಿಲೀಪ್ ಜಾದವ ಸೇರಿದಂತೆ ಧಾರವಾಡ, ಗದಗ, ಹಾವೇರಿ, ಕಾರವಾರ ಜಿಲ್ಲೆಗಳ ಅತಿಥಿ ಉಪನ್ಯಾಸಕರು ಪಾಲ್ಗೊಂಡಿದ್ದರು.

## ನಿಧನ ವಾರ್ತೆ

### ಮಾಂತೇಶ ಗೌಡನ್ನವರ



ಡಂಬಳ, ಗ್ರಾಮದ ಡಾ.ಅಂಬೇಡ್ಕರ ಕಾಲೋನಿಯ ಮಾದಿಗ ಸಮಾಜದ ಯುವಕ ಮಾಂತೇಶ ಬಸಪ್ಪ ಗೌಡನ್ನವರ (30)ಬುಧವಾರ ರಾತ್ರಿ ನಿಧನರಾಗಿದ್ದಾರೆ. ಪತ್ನಿ, ತಾಯಿ, ಅಣ್ಣ, ಇಬ್ಬರು ಅಕ್ಕಂದಿರು ಹಾಗೂ ಅಪಾರ ಬಂಧು-ಬಳಗವನ್ನಗಲಿದ್ದಾರೆ. ಮಾದಿಗ ಸಮಾಜದ ಹಿರಿಯರು, ಗ್ರಾಮದ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರು ಸಂತಾಪ ಸೂಚಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka